# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 177 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 01–02–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 177 | RNI No: KARKAN/2023/88462 | KA/SK/CTA-874/2024-2026 | Chitradurga | Date: 01-02-2025 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ದ್ವಿಚಕ್ರವಾಹನ ಸವಾರರಿಗೆ ಹೆಲ್ಮೆಟ್ ಧರಿಸಿ ಜಾಗೃತಿ ಮೂಡಿಸಿದ ಪೊಲೀಸ್ ಸಿಬ್ಬಂದಿ 2

ದೌರ್ಬಲ್ಯಗಳ ನಿವಾರಣೆಗೆ "ಅಂಬೇಡ್ಕರ್ ಓದು" ಅವಶ್ಯ 3

ಫೆ.7 ಹಾಗೂ 8 ರಂದು ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆ 4



ಸುದ್ದಿ, ಜಾಹಿರಾತಿಗೆ 9686622252


**ಫಾಸ್ಟ್ ನ್ಯೂಸ್**

## ಮೊಮ್ಮಕ್ಕಳನ್ನು ಆಡಿಸುತ್ತಿದ್ದ ವೃದ್ದೆಯ ಚಿನ್ನದ ಸರ ಅಪಹರಣ: ಹಾಡುಹಗಲೇ ರಸ್ತೆಯಲ್ಲಿ ಕಳ್ಳರ ಕೈಚಳಕ



» **ಚಳ್ಳಕೆರೆ**

ಹಾಡುಹಗಲೇ ಮನೆಯ ಆವರಣದಲ್ಲಿ ಕುಳಿತಿದ್ದ ವೃದ್ದೆಯ ಮಾಂಗಲ್ಯಸರವನ್ನು ಕಿತ್ತು ಪರಾರಿಯಾದ ಪ್ರಕರಣ ಕುಬೇರ ನಗರ ವ್ಯಾಪ್ತಿಯಲ್ಲಿ ಶುಕ್ರವಾರ ಮಧ್ಯಾಹ್ನ 1.30ರ ಸಮಯದಲ್ಲಿ ನಡೆದಿದೆ. ಷಾದೇವಿ(60) ಎಂಬ ವೃದ್ದೆ ಶಾಲೆಯಿಂದ ಬಂದ ಮೊಮ್ಮಕ್ಕಳನ್ನು ಮನೆಯ ಕಾಂಪೌಂಡ್‌ನಲ್ಲಿ ಆಟವಾಡಿಸುತ್ತಿದ್ದು ಅಲ್ಲಿಯೇ ಇದ್ದ ಚೇರ್ ಮೇಲೆ ಮಹಿಳೆ ಕುಳಿದ್ದಳು. ಪಲ್ಸರ್ ಬೈಕ್‌ನಲ್ಲಿ ಬಂದ ಇಬ್ಬರಲ್ಲಿ ಒಬ್ಬ ಬೈಕ್ ಮೇಲೆ ಕುಳಿತು, ಮತ್ತೊರ್ವ ವ್ಯಕ್ತಿ ಹಿಂಭಾಗದಿಂದ ಬಂದು ಮಹಿಳೆಯ ಕುತ್ತಿಗೆಯಲ್ಲಿದ್ದ ಸುಮಾರು 30ಗ್ರಾಂ ತೂಕದ 1.50 ಲಕ್ಷ ಮೌಲ್ಯದ ಬಂಗಾರದ ಸರವನ್ನು ಕಿತ್ತು ಪರಾರಿಯಾಗಿದ್ದಾನೆ. ಘಟನೆ ನಡೆದ ಸ್ಥಳಕ್ಕೆ ಡಿವೈಎಸ್ಪಿ ಟಿ.ಬಿ.ರಾಜಣ್ಣ, ಠಾಣಾ ಇನ್‌ಸ್ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಪರಿಶೀಲನೆ ನಡೆಸಿದ್ದು, ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ಧಾರೆ.

## ಪ್ರೋತ್ಸಾಹ ಧನಕ್ಕಾಗಿ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ನವ ಕಾನೂನು ಪದವೀಧರರಿಗೆ ಪ್ರತಿ ಮಾಹೆಯಾನ ರೂ.2,000/– ಪ್ರೋತ್ಸಾಹ ಧನ ನೀಡುವ ಸಂಬಂಧವಾಗಿ ಸರ್ಕಾರದ ಕಾನೂನು ಇಲಾಖೆಯವರು ಸೂಕ್ತ ಕ್ರಮ ಕೈಗೊಳ್ಳಲು ಕೋರಿದ್ದು, ಅದರಂತೆ ಜಿಲ್ಲೆಯ ಅರ್ಹ ನವ ಕಾನೂನು ಪದವೀಧರರಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2025ರ ಮಾರ್ಚ್ 09 ಅರ್ಜಿ ಸಲ್ಲಿಸಲು ಕೊನೆಯ ದಿನ. ಅರ್ಜಿಗಳನ್ನು 2025ರ ಫೆಬ್ರವರಿ 10 ರಿಂದ ಸಲ್ಲಿಸಬಹುದಾಗಿದ್ದು, ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು. ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ನೇರವಾಗಿ ಜಿಲ್ಲಾ ನ್ಯಾಯಾಲಯಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಚಿತ್ರದುರ್ಗ ಜಿಲ್ಲೆಯ ಇತರೆ ಎಲ್ಲಾ ತಾಲ್ಲೂಕುಗಳ ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ಆಯಾ ತಾಲ್ಲೂಕಿನ ಹಿರಿಯ ಸಿವಿಲ್ ನ್ಯಾಯಾಧೀಶರ ಮೂಲಕ ತಮ್ಮ ಅರ್ಜಿಗಳನ್ನು ಸಲ್ಲಿಸಬಹುದು. ಮೊಳಕಾಲ್ಮುರು ತಾಲ್ಲೂಕು ವ್ಯಾಪ್ತಿಯ ಅರ್ಹ ಅಭ್ಯರ್ಥಿಗಳು ಅಲ್ಲಿಯ ಸಿವಿಲ್ ನ್ಯಾಯಾಧೀಶರ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

ಅರ್ಹತೆಗಳು: ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನಡಿಯಲ್ಲಿ ದಿನಾಂಕ:01–06–2023 ರಿಂದ 31–05–2024 ರವರೆಗಿನ ಅವಧಿಯಲ್ಲಿ ವಕೀಲರ ವೃತ್ತಿಗೆ ನೊಂದಾಯಿಸಿಕೊಂಡಿರತಕ್ಕದ್ದು. ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ವರಮಾನದ ಮಿತಿಯು ರೂ.40,000/–ಗಳನ್ನು ಮೀರತಕ್ಕದ್ದಲ್ಲ (ಆದಾಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು), ಸರ್ಕಾರಿ, ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ವಯೋ ನಿವೃತ್ತಿ, ಕಡ್ಡಾಯ ನಿವೃತ್ತಿ ಮತ್ತು ಸ್ವ–ಇಚ್ಛಾ ನಿವೃತ್ತಿ ಹೊಂದಿದ ನಂತರ ವಕೀಲ ವೃತ್ತಿ ನಡೆಸಲು ಇಚ್ಛಿಸುವ ಕಾನೂನು ಪದವೀಧರರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ. ಅಂತಹ ಯಾವುದೇ ಸೇವೆಯಿಂದ ತೆಗೆದು ಹಾಕಲ್ಪಟ್ಟ ಕಾನೂನು ಪದವೀಧರರಿಗೆ ಸಹ ಅನ್ವಯವಾಗುವುದಿಲ್ಲ. ಇಂತಹದೇ ಸೌಲಭ್ಯವನ್ನು ಈ ಯೋಜನೆ, ಇತರೆ ಯೋಜನೆಯಡಿ ಅಥವಾ ರಾಜ್ಯ ಸರ್ಕಾರದ ಬೇರೆ ಯಾವುದೇ ಇಲಾಖೆಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳು ಈ ಯೋಜನೆಯ ಸೌಲಭ್ಯಗಳಿಗೆ ಅರ್ಹರಾಗತಕ್ಕದ್ದಲ್ಲ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನ್ಯಾಯಾಲಯ, ಚಿತ್ರದುರ್ಗ ಮತ್ತು ಜಿಲ್ಲೆಯ ಹಿರಿಯ ಸಿವಿಲ್ ಜಡ್ಜ್ ನ್ಯಾಯಾಲಯಗಳು ಹಾಗೂ ಸಿವಿಲ್ ಜಡ್ಜ್ ನ್ಯಾಯಾಲಯ, ಮೊಳಕಾಲ್ಮುರು ಹಾಗೂ ಜಿಲ್ಲೆಯ ಎಲ್ಲಾ ವಕೀಲರ ಸಂಘಗಳಲ್ಲಿ ಲಭ್ಯವಿರುವ ಮೇಲ್ಕಂಡ ಸರ್ಕಾರಿ ಆದೇಶದ ಪ್ರತಿಗಳಲ್ಲಿರುವ ಮಾರ್ಗಸೂಚಿಗಳನ್ನು ಮತ್ತು ಅರ್ಜಿ ನಮೂನೆಗಳನ್ನು ಪಡೆದುಕೊಳ್ಳಬಹುದಾಗಿದೆ.

# ಮಾ.8 ರಂದು ಲೋಕ ಅದಾಲತ್

## ಪ್ರಧಾನ ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ –ಕಳೆದ ಲೋಕ ಅದಾಲತ್‌ನಲ್ಲಿ 4777 ಪ್ರಕರಣಗಳು ಇತ್ಯರ್ಥ

» **ಚಿತ್ರದುರ್ಗ**

ಕಳೆದ ಡಿ.14 ರಂದು ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲೆಯಲ್ಲಿ ಬಾಕಿ ಇದ್ದ 4,777 ವ್ಯಾಜ್ಯ ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಇತ್ಯರ್ಥ ಪಡಿಸಲಾಗಿದೆ. ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ 11 ಜೋಡಿಗಳ ಮನ ಒಲಿಸಿ ಪುನಃ ಒಂದು ಮಾಡಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ ಹೇಳಿದರು.

ಶುಕ್ರವಾರ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ರಾಷ್ಟ್ರಿಯ ಲೋಕ ಅದಾಲತ್ ಆಯೋಜನೆ ಕುರಿತು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.



ಇದುವರೆಗೂ ಬಾಕಿ ಇದ್ದ 98,452 ವ್ಯಾಜ್ಯ ಪೂರ್ವ ಪ್ರಕರಣಗಳನ್ನು ವಿಲೆ ಮಾಡಲಾಗಿದೆ. ಜಿಲ್ಲೆಯಾದ್ಯಂತ 44,632 ಪ್ರಕರಣಗಳು ಬಾಕಿಯಿವೆ. ಮುಂಬರುವ ಮಾರ್ಚ್ 8 ರಂದು ರಾಷ್ಟ್ರಿಯ ಲೋಕ ಅದಲಾತ್ ಜರುಗಲಿದ್ದು, ಈಗಾಗಲೇ 3707 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಲು ಗುರುತಿಸಲಾಗಿದೆ. 15 ಪ್ರಕರಣಗಳಲ್ಲಿ ಪಕ್ಷಗಾರರ ಮನ ಒಲಿಸಿ ರಾಜಿ ಸಂಧಾನಕ್ಕೆ ಒಪ್ಪಿಸಲಾಗಿದೆ. ಕಳೆದ ಅದಾಲತ್‌ಗಿಂತಲೂ ಹೆಚ್ಚಿನ ಪ್ರಕರಣಗಳನ್ನು ಈ ಬಾರಿ ಇತ್ಯರ್ಥ ಪಡಿಸಲು ಗುರಿ ಹೊಂದಲಾಗಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ ತಿಳಿಸಿದರು.

ಜಿಲ್ಲೆಯ ನ್ಯಾಯಾಲಯಗಳಲ್ಲಿ ಪ್ರಸ್ತುತ 4,821 ಚಕ್ ಅಮಾನ್ಯ, 827 ವಿವಾಹ, 347 ಕೌಟುಂಬಿಕ ವ್ಯಾಜ್ಯ, 3,801 ಆಸ್ತಿ ವಿಭಾಗ ಹಾಗೂ ಜೀವನಾಂಶ ಕೋರಿ ಸಲ್ಲಿಸಿದ 641 ಪ್ರಕರಣಗಳು ಇವೆ. ಈ ಎಲ್ಲಾ ಸಿವಿಲ್ ವ್ಯಾಜ್ಯಗಳನ್ನು ಸುಲಭವಾಗಿ ಪಕ್ಷಗಾರರು ಬಗೆ ಹರಿಸಿಕೊಳ್ಳಬಹುದು. ಈ ಎಲ್ಲಾ ಪ್ರಕರಣಗಳಿಂದ ಸುಮಾರು 25,000 ಹೆಚ್ಚು ಜನರು ವಿನಾ ಕಾರಣ ನ್ಯಾಯಾಲಯಕ್ಕೆ ಅಲೆದಾಡುವುದು ತಪ್ಪುತ್ತದೆ. ಪ್ರಕರಣಗಳು ಸೌಹಾರ್ಧಯುತವಾಗಿ ಬಗೆಹರಿದರೆ, ಮೇಲಿನ ನ್ಯಾಯಾಲಯಗಳಿಗೆ ಮೇಲ್ಮನವಿ ಹೋಗುವುದು ತಪ್ಪುತ್ತದೆ ಎಂದರು.

ಸಿವಿಲ್ ನ್ಯಾಯಾಲಯದಲ್ಲಿ ಆಸ್ತಿ ವಿಭಾಗದ ಪ್ರಕರಣ ಒಂದು ವ್ಯಾಜ್ಯ ಮೂಲಕವೇ ಇತ್ಯರ್ಥವಾಗಬೇಕಾದ 3 ಬಾರಿ ಆದೇಶಗಳನ್ನು ನ್ಯಾಯಾಲಯ ಹೊರಡಿಸಬೇಕಾಗತ್ತದೆ. ನ್ಯಾಯಾಲಯ ಹೊರಡಿಸುವಡಿಕ್ರಿಆದೇಶಪ್ರಶ್ನಿಸಿಮೇಲ್ಮನವಿ ಸಲ್ಲಿಸಿದರೆ, ಮೇಲಿನ ನ್ಯಾಯಾಲಯದಲ್ಲಿ ಪ್ರಕರಣ ಇತ್ಯರ್ಥವಾಗುವವರೆಗೂ ನ್ಯಾಯಾಲಯ ಮುಂದಿನ ಆದೇಶ ಹೊರಡಿಸಲು ಸಾಧ್ಯವಿಲ್ಲ. ಇದರಿಂದ ಪ್ರಕರಣ ವಿಲೇವಾರಿ ತಲೆಮಾರುಗಳ ಕಾಲ ಮುಂದೆ ಹೋಗುತ್ತದೆ. ಇದರ ಬದಲಾಗಿ ಹೊಂದಾಣಿಯಿಂದ ಪಕ್ಷಗಾರರು ಪ್ರಕರಣ ಇತ್ಯರ್ಥ ಪಡಿಸಿಕೊಂಡರೆ ಬೇಗನೆ ತೀರ್ಪು ನೀಡಬಹುದು. ಪತಿ–ಪತ್ನಿ ಪ್ರಕರಣಗಳಲ್ಲಿ ಅಹಂ ಭಾವದಿಂದ ವರ್ತಿಸದೇ ಸೋತು ಗೆದ್ದರೆ ವಿಚ್ಛೇಧನ ಪ್ರಮಾಣ ಕಡಿಮೆಯಾಗುತ್ತದೆ ಎಂದು ನ್ಯಾಯಾಧೀಶ ಅಧ್ಯಕ್ಷ ರೋಣ ವಾಸುದೇವ ಅಭಿಪ್ರಾಯಪಟ್ಟರು.

ನೂತನ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣಕ್ಕೆ ನಗರದ ಹೊರ ವಲಯದಲ್ಲಿ 9.25 ಎಕರೆ ಜಮೀನು ಗುರುತಿಸಿ ಸ್ವಾಧೀನಕ್ಕೆ ಪಡೆಯಲಾಗಿದೆ. ಅನುದಾನ ಬಿಡುಗಡೆಯಾದ ಕೂಡಲೇ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗುವುದು. ಈಗಿರುವ ಜಿಲ್ಲಾ ನ್ಯಾಯಾಲಯವನ್ನು 1965ರಲ್ಲಿ ನಿರ್ಮಿಸಲಾಗಿದೆ. ಇಂದು ಜನಸಂಖ್ಯೆ ಹೆಚ್ಚಳವಾಗಿದ್ದು, ನೂತನ ನ್ಯಾಯಾಲಯದ ಅವಶ್ಯಕತೆ ಇದೆ. ಮೊಳಕಾಲ್ಮೂರು ಪಟ್ಟಣದಲ್ಲೂ ನೂತನ ತಾಲ್ಲೂಕು ನ್ಯಾಯಾಲಯ ಸ್ಥಾಪಿಸಲು ಜಾಗ ಗುರುತಿಸಲಾಗಿದೆ ಎಂದು ನ್ಯಾಯಾಧೀಶ ಅಧ್ಯಕ್ಷ ರೋಣ ವಾಸುದೇವ ಮಾಹಿತಿ ನೀಡಿದರು.

ರಾಷ್ಟ್ರೀಯ ಲೋಕ ಅದಾಲತ್ ಸದುಪಯೋಗಪಡಿಸಿಕೊಂಡು ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಲೋಕ ಅದಾಲತ್‌ನಲ್ಲಿ ವ್ಯಾಜ್ಯಪೂರ್ವ ಪ್ರಕರಣಗಳಾದ ಚೆಕ್ ಅಮಾನ್ಯ, ಬ್ಯಾಂಕ್ ವಸೂಲಾತಿ, ಉದ್ಯೋಗ, ಕಾರ್ಮಿಕ, ವೇತನ, ವಿದ್ಯುತ್,ನೀರು ಇತರೆ ಸೇವಾ ಶುಲ್ಕದ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಅವಕಾಶವಿದೆ. ಇದರರೊಂದಿಗೆ ನ್ಯಾಯಾಲಯದ ವ್ಯಾಜ್ಯದಲ್ಲಿರುವ ನಾನ್ ಕಾಂಪೌಡಬಲ್ ಹಾಗೂ ಗಂಭೀರ ತರದ ಅಪರಾಧಿಕ ಪ್ರಕರಣಗಳನ್ನು ಹೊರತು ಪಡಿಸಿ, ಇತರೆ ಪ್ರಕರಣಗಳನ್ನು ರಾಜಿ ಮಾಡಿಕೊಳ್ಳಬಹುದು. ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಲೋಕ ಅದಾಲತ್‌ನಲ್ಲಿ ಭಾಗವಹಿಸಬಹುದು. ಸಾರ್ವಜನಿಕರು ಲೋಕ ಅದಾಲತ್ ಕುರಿತು ಹೆಚ್ಚಿನ ಪ್ರಶ್ನೆ ಮತ್ತು ಮಾಹಿತಿಗಾಗಿ ಬೇಕಾದಲ್ಲಿ ಇ–ಮೇಲ್ dlsachitradurga3@gmail.com ಹಾಗೂ ಸದಸ್ಯ ಕಾರ್ಯದರ್ಶಿಯವರ ಕಚೇರಿ ಮೊಬೈಲ್ ಸಂಖ್ಯೆ 9141193935 ಹಾಗೂ ದೂರವಾಣಿ ಸಂಖ್ಯೆ 08194– 222322 ಕ್ಕೆ ಸಹ ಸಂಪರ್ಕಿಸಬಹುದು ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.

# ಚಿತ್ರದುರ್ಗ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಶಿವಪ್ರಸಾದ್, ಉಪಾಧ್ಯಕ್ಷರಾಗಿ ಶರಣಪ್ಪ ಆಯ್ಕೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ (ಪಿಎಲ್‌ಡಿ) ಬ್ಯಾಂಕ್‌ನ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಪಿ.ಜೆ.ಶಿವಪ್ರಸಾದ್, ಉಪಾಧ್ಯಕ್ಷರಾಗಿ ಎಂ.ಎನ್.ಶರಣಪ್ಪ ಅವಿರೋಧವಾಗಿ ಆಯ್ಕೆಯಾದರು.

ಪಿಎಲ್ ಡಿ ಬ್ಯಾಂಕ್ ಚುನಾವಣೆಯಲ್ಲಿ ನಿರ್ದೇಶಕರಾಗಿ ಆಯ್ಕೆಯಾಗಿದ್ದ ಪಿಳ್ಳೆಕರನಹಳ್ಳಿ ಶಿವಪ್ರಸಾದ್ ಅಧ್ಯಕ್ಷ ಸ್ಥಾನಕ್ಕೆ ಮತ್ತು ಎಂ.ಎನ್.ಶರಣಪ್ಪ ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ದೆ ಮಾಡಿದ್ದರು ಆದರೆ ಯಾರು ಇವರ ವಿರುದ್ದ ನಾಮಪತ್ರ ಸಲ್ಲಿಸದ ಹಿನ್ನೆಲೆ ಅವಿರೋಧವಾಗಿ ಇಬ್ಬರು ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಪ್ರಕಟಿಸಿದ್ದಾರೆ.

ನೂತನ ಅಧ್ಯಕ್ಷ ಪಿ.ಜೆ.ಶಿವಪ್ರಸಾದ್ ಮಾತನಾಡಿ ಸಂಸ್ಥೆಯಲ್ಲಿ ಸದಸ್ಯತ್ವ ಹೊಂದಿರುವ ತಾಲೂಕಿನ ರೈತರಿಗೆ ಪಿಎಲ್‌ಡಿ ಬ್ಯಾಂಕ್ ಮೂಲಕ ಸಿಗಬಹುದಾದ ಸರ್ಕಾರದ ವಿವಿಧ ಬಗೆಯ ಸಾಲ ಸವಲತ್ತು ತಲುಪಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.

ನಮ್ಮ ತಂದೆಯ ಕಾಲದಿಂದಲೂ ನಮಗೆ ಪಿಎಲ್ ಡಿ ಬ್ಯಾಂಕ್ ಜೊತೆ ಒಡನಾಟವಿದೆ. ನಮ್ಮ ತಂದೆ ಸಹ ಇಲ್ಲಿ ಅಧ್ಯಕ್ಷರಾಗಿ ಕೆಲಸ ಮಾಡಿದ್ದರು. ನಾನು ಸಹ ಬ್ಯಾಂಕ್‌ನ ಕಾರ್ಯ



ಚಟುವಟಿಕೆಗಳನ್ನು ಮತ್ತಷ್ಟು ಹೆಚ್ಚು ಮಾಡುವ ಜೊತೆಗೆ, ಆಡಳಿತ ಮಂಡಳಿಯ ಎಲ್ಲ ನಿರ್ದೇಶಕರ ಮತ್ತು ಹಿರಿಯ ಸಹಕಾರಿಗಳ ಸಲಹೆ ಮಾರ್ಗದರ್ಶನ ಪಡೆದು ಬ್ಯಾಂಕ್‌ನ ಅಭಿವೃದ್ಧಿಗೆ ಪೂರಕವಾಗಿ ಕ್ರಮವಹಿಸಲಾಗುವುದು ಎಂದರು.

ಸಂಸ್ಥೆಗೆ ನಾನು ಅಧ್ಯಕ್ಷನಾಗಲು ಕಾರಣಕರ್ತರಾದ ಎಲ್ಲಾ ಮತದಾರರಿಗೆ ಮತ್ತು ನಿರ್ದೇಶಕರಿಗೆ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಸಹಕಾರ ನೀಡಿದ ಎಲ್ಲಾರಿಗೂ ಧನ್ಯವಾದಗಳು ತಿಳಿಸುತ್ತೇನೆ ಎಂದರು.

ಅವಿರೋಧ ಆಯ್ಕೆಯಾಗುತ್ತಿದ್ದಂತೆ ಬ್ಯಾಂಕ್‌ನ ಮುಂಭಾಗದಲ್ಲಿ ಅಭಿಮಾನಿಗಳು, @ಚಿ ಪಟಾಕಿ ಸಿಡಿಸಿ ಸಾರ್ವಜನಿಕರಿಗೆ ಸಿಹಿ ವಿತರಿಸುವ ಮೂಲಕ ವಿಜಯೋತ್ಸವ ಆಚರಿಸಿದರು.

ಈ ಸಂದರ್ಭದಲ್ಲಿ ನಿರ್ದೇಶಕರಾದ ಜೆ.ಶಿವಪ್ರಕಾಶ್, ಕೆ.ಆರ್.ರವಿ, ಪಿ.ಎಸ್. ಜಗದೀಶ್, ಎನ್.ಎಸ್.ಮಾರುತಿ, ವನಜಾಕ್ಷಮ್ಮ, ಹೆಚ್.ಸಿ.ವಿಜಯಕುಮಾರ್, ಮಣ್ಣೆರು ನಾಗಪ್ಪ, ಕೆ.ಸಿ.ಮೌನೇಶ್, ಕೆ.ಎಸ್.ಸತೀಶ್, ಎನ್.ಆರ್. ಕೊಟ್ರೇಶ್, ಪದ್ಮ, ಕೆ.ಜೆ.ಸುನೀಲ್ ಇದ್ದರು.

# ಚನ್ನಗಿರಿ ನೀರಾವರಿ ಅಭಿವೃದ್ಧಿಗೆ ನೆರವು ಕೋರಿದ ಶಾಸಕ



» **ಬೆಂಗಳೂರು**

ಉಬ್ರಾಣಿ ಹಾಗೂ ಅಮೃತಾಪುರ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧ್ಯಕ್ಷತೆಯಲ್ಲಿ ಕರ್ನಾಟಕ ನೀರಾವರಿ ನಿಗಮ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯಲ್ಲಿ ಚನ್ನಗಿರಿ ಕ್ಷೇತ್ರದ ನೀರಾವರಿ ಅಭಿವೃದ್ಧಿಗೆ ಹೆಚ್ಚು ಅನುದಾನ ನೀಡುವಂತೆ ಶಾಸಕರಾದ ಬಸವರಾಜು ವಿ ಶಿವಗಂಗಾ ಒತ್ತಾಯಿಸಿದರು. ತುಂಗಾ ಮೇಲ್ದಂಡೆ ವಲಯ ಯೋಜನೆಗಳ ಕಾಮಗಾರಿಗಳ ಪರಿಶೀಲನಾ ಸಭೆಯಲ್ಲಿ ಶಾಸಕರು ಪ್ರಸ್ತಾಪಿಸಿ ರೈತರ ಹಿತ ಕುರಿತು ಮಾನವರಿಕೆ ಮಾಡಿದರು. ತುಂಗಾ ಮೇಲ್ದಂಡೆ ಯೋಜನೆ ವಲಯ ವ್ಯಾಪ್ತಿ ಚನ್ನಗಿರಿ ವಿಧಾನಸಭಾ ಕ್ಷೇತ್ರದ ಜಲಸಂಪನ್ಮೂಲ ಇಲಾಖೆಯಿಂದ ಪ್ರಗತಿಯಲ್ಲಿರುವ ಕಾಮಗಾರಿಗಳು, ಕೈಗೊಳ್ಳಬೇಕಾರುವ ಯೋಜನೆಗಳನ್ನು ತ್ವರಿತವಾಗಿ ಪರಿಹರಿಸುವಂತೆ ಒತ್ತಾಯಿಸಿದರು. ಬ್ರಾಣಿ, ಅಮೃತಾಪುರ ಏತನೀರಾವರಿ ಯೋಜನೆಗೆ ಸಂಬಂಧಿಸಿದಂತೆ ಅಭಿವೃದ್ಧಿ ಕುರಿತು ಸಚಿವರು ಹಾಗೂ ಉಪ ಮುಖ್ಯಮಂತ್ರಿಗಳಿಗೆ ತಿಳಿಸಿದರು. ರೈತರ ಬಗ್ಗೆ ವಿಶೇಷ ಕಾಳಜಿ ತೋರಿದ ಶಾಸಕರಾದ ಬಸವರಾಜು ವಿ. ಶಿವಗಂಗಾ ಅವರಿಗೆ ಉತ್ತಮ ಸೇವೆ ಮಾಡುತ್ತಿರುವೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು.ಚನ್ನಗಿರಿ ತಾಲ್ಲೂಕಿಗೆ ಜಲಸಂಪನ್ಮೂಲ ಇಲಾಖೆಯಿಂದ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

**ಪ್ರಮುಖ ಸುದ್ದಿ**


# ಚಳ್ಳಕೆರೆ ನಗರಸಭೆ: 75.60 ಲಕ್ಷ ಉಳಿತಾಯ ಬಜೆಟ್ ಮಂಡನೆ

» **ಚಳ್ಳಕೆರೆ**

ನಗರಸಭೆಯ2025–26ನೇ ಸಾಲಿನ 75.60 ಲಕ್ಷ ಉಳಿತಾಯ ಬಜೆಟ್ಟು ನಗರಸಭೆ ಅಧ್ಯಕ್ಷೆ ಜೈತುಂಬಿ ಶುಕ್ರವಾರ ಮಂಡಿಸಿದರು.

2025–26ನೇ ಸಾಲಿನ ಬಜೆಟ್ ಕುಡಿಯುವ ನೀರು, ಚರಂಡಿ, ರಸ್ತೆ, ಸ್ವಚ್ಚತೆ, ವಿದ್ಯುತ್ ದೀಪವೂ ಸೇರಿದಂತೆ ಮೂಲಸೌಲಭ್ಯ ಒದಗಿಸುವಂತಹ ಬಜೆಟ್ ರೂಪಿಸಿದೆ. ಯೋಜನೆಯನ್ನು ಯಥಾವತ್ತಾಗಿ ಜಾರಿಗೆ ತರಲು ಎಲ್ಲಾ ಚುನಾಯಿತ ಸದಸ್ಯರು ನನ್ನೊಂದಿಗೆ ಕೈಜೋಡಿಸಿ, ಪ್ರಸ್ತುತ ಸಾಲಿನಲ್ಲಿ ಸುಮಾರು 75.60 ಲಕ್ಷ ಮೌಲ್ಯದ ಉಳಿತಾಯ ಬಜೆಟ್ ನನ್ನದಾಗಲಿದೆ ಎಂದರು.

ಪೌರಾಯುಕ್ತಜಗರೆಡ್ಡಿ,ಎಲ್ಲರಅಭಿಪ್ರಾಯ ಪಡೆದು ಬಜೆಟ್ಟು ರೂಪಿಸಲಾಗಿದೆ. ಚಳ್ಳಕೆರೆ ನಗರದ ಅಭಿವೃದ್ದಿಗೆ ಹೆಚ್ಚು ಒತ್ತು ನೀಡಲಾಗಿದೆ. ನಗರದ ನಾಗರೀಕರಿಗೆ ಇನ್ನೂ ಹೆಚ್ಚಿನ ಸೌಲಭ್ಯ ನೀಡುವ ಕುರಿತು ಚಿಂತನೆ ನಡೆಸಲಾಗಿದೆ. 75.60 ಲಕ್ಷ ಉಳಿತಾಯ ಬಜೆಟನ್ನು ಮಂಡಿಸಲು ಅವಕಾಶ ನೀಡಿದ ಎಲ್ಲರಿಗೂ ಧನ್ಯವಾದ ಅರ್ಪಿಸಿದರು. ಬಜೆಟ್ ಪ್ರತಿಯನ್ನು ವಿವರವಾಗಿ ಓದಿದ ಅಕೌಂಟೆಟ್ ಹರೀಶ್ ಸದಸ್ಯರ ಸಮಸ್ಯೆಗಳಿಗೆ ಉತ್ತರ




ನೀಡಿದರಲ್ಲದೆ, ಬಜೆಟ್ನಲ್ಲಿ ರೂಪಿಸಲಾದ ಎಲ್ಲಾ ಯೋಜನೆಗಳ ಅನಷ್ಠಾನಕ್ಕೆ ಪಕ್ಷಬೇದ ಮರೆತು ಎಲ್ಲಾ ಸದಸ್ಯರು ಕೈಜೋಡಿಸುವಂತೆ ಮನವಿ ಮಾಡಿದರು.

ಸ್ಥಾಯಿಸಮಿತಿಅಧ್ಯಕ್ಷಟಿ.ಮಲ್ಲಿಕಾರ್ಜುನ್ ಮಾತನಾಡಿ, ಪ್ರಸ್ತುತ 2025–26ನೇ ಸಾಲಿನ ಬಜೆಟ್ ಬಗ್ಗೆ ಸಂಪೂಣ ಮಾಹಿತಿ ಪಡೆಯಲಾಗಿದೆ. 75.60 ಲಕ್ಷ ಲಾಭದ ಬಜೆಟ್ ವಿವರಿಸಿದರು. ನಗರಸಭೆಯ ಅವ್ಯವಹಾರದ ಬಗ್ಗೆ ದಿನಪತ್ರಿಕೆಯಲ್ಲಿ ವಿತರಣೆಯಾದ ಕರಪತ್ರವನ್ನು ಹಿಡಿದು ಅನೇಕ ಸದಸ್ಯರು ನಗರಸಭೆಯ ಆಡಳಿತದ ಬಗ್ಗೆ ಸಾರ್ವಜನಿಕರಲ್ಲಿ ತಪ್ಪು ಅಭಿಪ್ರಾಯ ಮೂಡುವಂತಾಗಿದೆ. ನಗರಸಭೆ ಆಸ್ತಿಗೆ ಬೇರೆ ಯಾರೋ ಮಾಲೀಕರಂತೆ ವರ್ತನೆ ಮಾಡುತ್ತಿದ್ದಾರೆ. ಈ ಬಗ್ಗೆ ಕೂಡಲೇ ಎಲ್ಲಾ ಸದಸ್ಯರೊಳಗೊಂಡಂತೆ ತುರ್ತು ಸಭೆ ಕರೆದು ಸ್ವಷ್ಟಪಡಿಸಬೇಕು. ಹೈಕೋರ್ಟ್ ನ್ಯಾಯವಾದಿಗಳಿಂದ ಸಂಪೂಣ ಮಾಹಿತಿಯೊಂದಿಗೆ ಮುಂದಿನ ಸಭೆಯಲ್ಲಿ ಮಂಡಿಸಬೇಕೆಂದು ಆಗ್ರಹಿಸಿದರು.

ಸದಸ್ಯರಾದ ರಮೇಶ್ಗೌಡ, ಕೆ.ವೀರಭದ್ರಪ್ಪ, ಜಯಲಕ್ಷ್ಮಿ, ಸಿ.ಶ್ರೀನಿವಾಸ್, ಎಸ್.ಜಯಣ್ಣ, ವೈ.ಪ್ರಕಾಶ್, ಸಿ.ಎಂ.ವಿಶುಕುಮಾರ್, ವಿರೂಪಾಕ್ಷಿ, ಎಚ್.ಪ್ರಶಾಂತ್ಕುಮಾರ್, ಚಳ್ಳಕೆರೆಯಪ್ಪ, ಶಿಲ್ಪ, ಸುಮಕ್ಕ, ಮಂಜುಳಾ, ಹೊಯ್ಸಳಗೋವಿಂದ, ಶಿವಕುಮಾರ್, ಸಾಕಮ್ಮ, ಕವಿತಾನಾಯಕಿ, ನಾಗಮಣಿ, ನಿರ್ಮಲ, ತಿಮ್ಮಕ್ಕ, ನಾಮಿನಿ ಸದಸ್ಯರಾದ ಅನ್ವರ್ಮಾಸ್ಟರ್, ವೀರಭದ್ರಪ್ಪ, ನೇತಾಜಿಪ್ರಸನ್ನ, ನಟರಾಜ್, ಬಡಗಿಪಾಪಣ್ಣ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಜಿಲ್ಲಾ ಪ್ರವಾಸ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಫೆಬ್ರವರಿ 05 ಮತ್ತು 06ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಫೆ.05ರಂದು ಬೆಳಿಗ್ಗೆ 6ಕ್ಕೆ ಬೆಂಗಳೂರಿನಿಂದ ರೈಲಿನ ಮೂಲಕ ಹೊರಟು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ನಂತರ ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಪಿಳ್ಳೆಕೆರೆನಹಳ್ಳಿಯ ಬಾಪೂಜಿ ಸಮೂಹ ಸಂಸ್ಥೆಗಳ ಸಹಯೋಗದಲ್ಲಿ ಬಾಪೂಜಿ ಸಮೂಹ ಸಭಾಂಗಣದಲ್ಲಿ ಏರ್ಪಡಿಸಿರುವ ಉಪನ್ಯಾಸ ಮತ್ತು ಸಂವಾದ ಕಾರ್ಯಕ್ರಮ ಉದ್ಘಾಟಿಸುವರು. ಮಧ್ಯಾಹ್ನ 1ಕ್ಕೆ ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ಭೇಟಿ ನೀಡುವರು. ಮಧ್ಯಾಹ್ನ 2ಕ್ಕೆ ಚಿತ್ರದುರ್ಗ ಜಿಲ್ಲೆಯ ತರಳಬಾಳು ರಸ್ತೆಯಲ್ಲಿರುವ ಚಿಕ್ಕಪುರ ಗೊಲ್ಲರಹಟ್ಟಿಗೆ ಭೇಟಿ ನೀಡುವುದು. ಸಂಜೆ 6ಕ್ಕೆ ಚಿತ್ರದುರ್ಗ ಜಿಲ್ಲೆಯ ಸಿರಿಗೆರೆ ತರಳಬಾಳು ಜಗದ್ಗುರು ಬೃಹನ್ಮಠ ವತಿಯಿಂದ ವಾರ್ಷಿಕ ಮಹೋತ್ಸವದಲ್ಲಿ "ಮಹಿಳೆ ಮತ್ತು ಸಮಾಜ" ವಿಷಯದ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸುವುದು. ನಂತರ ರಾತ್ರಿ ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡುವರು. ಫೆ.06ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಹಿಳಾ ಪ್ರಗತಿ ಪರಿಶೀಲನಾ ಸಭೆ ನಡೆಸುವರು. ಎಸ್‌ಹೆಚ್‌ಡಬ್ಲ್ಯು ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಹಾಗೂ ಪ್ರಕರಣಗಳು ದಾಖಲಾದ ಬಗ್ಗೆ ಅಂಕಿ ಅಂಶಗಳೊಂದಿಗೆ ಚರ್ಚೆ, ಸರ್ಕಾರಿ, ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಆಂತರಿಕ ದೂರು ಸಮಿತಿ ಬಗ್ಗೆ ಪರಿಶೀಲನೆ, ಮಹಿಳಾ ದೌರ್ಜನ್ಯ ಪ್ರಕರಣಗಳ ಬಗ್ಗೆ ಚರ್ಚೆ, ಮಹಿಳಾ ರಿಸರ್ವೇಶನ್, ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಬಗ್ಗೆ ಜಿಲ್ಲಾಡಳಿತ ತೆಗೆದುಕೊಂಡ ಕ್ರಮದ ಬಗ್ಗೆ ಚರ್ಚೆ ನಡೆಸುವರು. ಮಧ್ಯಾಹ್ನ 1ಕ್ಕೆ ಪತ್ರಿಕಾಗೋಷ್ಠಿ ನಡೆಸುವರು. ಸಂಜೆ 4.30ಕ್ಕೆ ಚಿತ್ರದುರ್ಗದಿಂದ ರೈಲಿನ ಮೂಲಕ ಹೊರಟು ರಾತ್ರಿ 9.30ಕ್ಕೆ ಬೆಂಗಳೂರು ತಲುಪುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಆಸಕ್ತ ಬರಹಗಾರರಿಂದ ಲೇಖನ ಆಹ್ವಾನ

» **ವಿಜಯನಗರ**

ಕಲ್ಯಾಣಕರ್ನಾಟಕಪ್ರದೇಶಅಭಿವೃದ್ಧಿಮಂಡಳಿಯು ಕಲ್ಯಾಣ ಕರ್ನಾಟಕದ ಭಾಷೆ, ಸಾಹಿತ್ಯ, ಸಾಮರಸ್ಯ ಸಂಸ್ಕೃತಿ, ಶೋಷಿತರ ಮಹಿಳೆಯರ ಸ್ಥಿತಿಗತಿ, ಸ್ವಾತಂತ್ರ್ಯಚಳುವಳಿ, ಸಾಮಾಜಿಕ ಚಳುವಳಿಗಳು, 371ನೇ ಕಲಂ ಹೋರಾಟ ಮತ್ತು ಅನುಷ್ಠಾನ, ಸಾಧಕ ಬಾಧಕಗಳು, ಭವಿಷ್ಯದಲ್ಲಿ ಅಭಿವೃದ್ಧಿಪರ ಹಮ್ಮಿಕೊಳ್ಳಬೇಕಾದ ಯೋಜನೆಗಳ ಸೇರಿದಂತೆ ಒಟ್ಟಾರೆ ಇತಿಹಾಸದ ಕುರಿತು ಆಯಾ ಕ್ಷೇತ್ರಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದ ವಿದ್ವತ್ಪೂರ್ಣ ಸಂಶೋಧನಾ ಪುಸ್ತಕಗಳನ್ನು ಹೊರತರಲು ಯೋಚಿಸಿದ್ದು, ಇದಕ್ಕಾಗಿ ಆಸಕ್ತ ಬರಹಗಾರರಿಂದ ಸಾರಲೇಖನ ಆಹ್ವಾನಿಸಿದೆ. ಪ್ರಾಚೀನ, ಮಧ್ಯಕಾಲಿನ, ಆಧುನಿಕ ರಾಜ್ಯಾಡಳಿತ ಸೇರಿದಂತೆ, ಸಂಸ್ಥಾನಿಕರ ಕಾಲಘಟ್ಟದ ಇತಿಹಾಸ, ರಾಜ್ಯಶಾಹಿ ವ್ಯವಸ್ಥೆಯಿಂದ ಪ್ರಜಾಶಾಹಿ ಭಾರತದಲ್ಲಿ ವಿಲೀನಘಟ್ಟ, ಏಕೀಕರಣ ಚಳುವಳಿ, ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಘಟ್ಟಗಳು, ಸಾಮಾಜಿಕ ಚಳುವಳಿಗಳು, ಸತ್ಯಶೋಧನಾ ಸಮಿತಿ ವರದಿ, ಫಜಲ್ ಅಲಿ ಆಯೋಗದ ವರದಿ, ಧರ್ಮಸಿಂಗ್ ಸಮಿತಿ ವರದಿ, ಬಚಾವತ್ ಆಯೋಗದ ವರದಿ, ನಂಜುಂಡಪ್ಪ ಆಯೋಗದ ವರದಿಗ ಅಧ್ಯಯನ, ಮಾನವ ಅಭಿವೃದ್ಧಿ, ಮಾಧ್ಯಮ, ಪ್ರಾದೇಶಿಕ ಅಸಮತೋಲನೆ, ಈ ಭಾಗದ ಉಡುಗೆ ತೊಡುಗೆ, ಆಹಾರ, ಪರಿಸರ, ಖನಿಜಸಂಪತ್ತು, ಅಲೆಮಾರಿ, ಕಲೆ, ಅರಣ್ಯ, ವಿಜ್ಞಾನ, ತಂತ್ರಜ್ಞಾನ, ನೀರಾವರಿ, ಕೈಗಾರಿಕೆ, ವಾಣಿಜ್ಯ, ಸಾರಿಗೆ, ರಸ್ತೆ ಸಂಪರ್ಕ, ಕ್ರೀಡೆ ಕ್ಷೇತ್ರಗಳ ಕುರಿತು ರಾಷ್ಟ್ರ–ಅಂತರಾಷ್ಟ್ರೀಯ ಮಟ್ಟದಲ್ಲಿ ಸಂಶೋಧನೆ ಮಾಡಿರುವ ವಿದ್ವಾಂಸರಿಂದ ಒಂದು ನೂರು ಪುಸ್ತಕಗಳನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ ಬರೆಸಿ ಪ್ರಕಟಿಸಲಾಗುತ್ತಿದೆ. ಈ ಯೋಜನೆಯಲ್ಲಿ ಸಂಶೋಧನಾತ್ಮಕ ಪುಸ್ತಕ ಬರೆಯುವ ಆಸಕ್ತಿ ಇರುವವರು ತಾವು ಪುಸ್ತಕ ಬರೆಯಬಹುದಾದ ಕ್ಷೇತ್ರ, ವಿಷಯ, ಶೀರ್ಷಿಕೆಗಳನ್ನು ಸ್ಪಷ್ಟವಾಗಿ ಬರೆದು ಐದು ಪುಟಗಳಿಗೆ ಮೀರದಂತೆ ಸಾರಲೇಖಗಳನ್ನು ಫೆಬ್ರವರಿ 20 ರೊಳಗೆ ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, 'ಅಭಿವೃದ್ಧಿ ಭವನ' ಐವಾನ–ಏ–ಶಾಹಿ, ಕಲಬುರಗಿ–585102 ವಿಳಾಸಕ್ಕೆ ಅಂಚೆ ಮೂಲಕ, ಖುದ್ದಾಗಿ ಅಥವಾ ಇಮೇಲ್ ವಿಳಾಸ ಇಇಜಣುಛಿಜಿ@ರಟಚುಟ.ಛಿಠಟ ಮೂಲಕವೂ ಸಲ್ಲಿಸಬಹುದು. ಸಾರಲೇಖವು ಆಯ್ದ ಕ್ಷೇತ್ರಗಳಲ್ಲಿ, ಆಯ್ದ ವಿಷಯಕ್ಕೆ ಸಂಬಂಧಿಸಿದ ಇದುವರೆಗಿನ ಅಧ್ಯಯನಗಳು, ಸಿದ್ಧಾಂತಗಳ ಅನ್ವಯ, ಅಧ್ಯಯನ ಕ್ಷೇತ್ರದ ಸದ್ಯದ ಪರಿಸ್ಥಿತಿ, ಪ್ರಸ್ತುತ ಅಧ್ಯಯನಕ್ಕೆ ಬಳಸಿಕೊಳ್ಳುವ ಸಿದ್ಧಾಂತ ಮತ್ತು ವಿಧಾನಗಳು, ಅವುಗಳ ಸಮರ್ಪಕತೆ, ಆಯ್ದುಕೊಂಡ ವಿಷಯದ ಅಧ್ಯಯನದ ಫಲಿತಗಳು, ಸಾಮಾಜಿಕ ಉಪಯೋಗಗಳು ಇವುಗಳನ್ನು ಒಳಗೊಂಡಿರಬೇಕು. ಸೂಚಕ ಪದಗಳು ಮತ್ತು ಅವಶ್ಯ ಸಂದರ್ಭಗ್ರಂಥಗಳು ಕಡ್ಡಾಯವಾಗಿ ಇರಬೇಕು. ಸಲ್ಲಿಕೆಯಾದ ಸಾರಾಲೇಖಗಳನ್ನು ಪರಿಶೀಲನಾ ಸಮಿತಿ ಆಯ್ಕೆ ಮಾಡಲಿದ್ದು, ಸಮಿತಿಯ ನಿರ್ಣಯವೇ ಅಂತಿಮವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.9844615020 ಸಂಖ್ಯೆಗೆಸಂಪರ್ಕಿಸಬಹುದುಎಂದುಕೆಕೆಆರ್‌ಡಿಬಿ ಮಂಡಳಿಯ ಉಪ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನಸಿಕ ಆರೋಗ್ಯ ಕಾಯ್ದೆ ಕುರಿತು ಅರಿವು ಅಗತ್ಯ

» **ಚಿತ್ರದುರ್ಗ**



ವಕೀಲರು ಹಾಗೂ ಅಧಿಕಾರಿಗಳು ಮಾನಸಿಕ ಆರೋಗ್ಯ ಕಾಯ್ದೆ ಕುರಿತು ಅರಿವು ಹೊಂದುವುದು ಅಗತ್ಯವಾಗಿದೆ. ಪ್ರತಿ ಕಾಯ್ದೆಗಳಿಗೂ ತನ್ನದೇ ಆದ ಮಹತ್ವವಿದೆ. ಅವುಗಳನ್ನು ಸಮಯ ಸಂದರ್ಭಕ್ಕೆ ತಕ್ಕಹಾಗೆ ಬಳಸುವುದರಿಂದ ನೊಂದವರಿಗೆ ನ್ಯಾಯ ದೊರಕಿಸಿಕೊಡಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಮಧ್ಯಸ್ಥಿಕೆ ಸಭಾಂಗಣದಲ್ಲಿ ಗುರುವಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಆಯೋಜಿಸಲಾದ 'ಮನೋನ್ಯಾಯ್' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರಾಷ್ಟ್ರೀಯ ಕಾನೂನು ಸೇವಗಳ ಪ್ರಾಧಿಕಾರದಅಡಿಯಲ್ಲಿಮಾನಸಿಕಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿರುವರಿಗೆ ಉಚಿತವಾಗಿ ಕಾನೂನು ಸಹಾಯ ಒದಗಿಸಲು ಯೋಜನೆ ರೂಪಿಸಲಾಗಿದೆ. ಇದರ ಅನ್ವಯ ನ್ಯಾಯಾಲಯವೇ ಇವರ ಹಕ್ಕುಗಳನ್ನು ರಕ್ಷಣೆ ಮಾಡುವ ಜವಬ್ದಾರಿ ಹೊಂದಿದೆ ಎಂದರು.

ವೈದ್ಯರಿಂದ ಚಿಕಿತ್ಸೆ, ವಕೀಲರ ನೇಮಕ, ಪೋಷಕರಿಗೆ ಹಸ್ತಾಂತರಿಸುವುದು ಸೇರಿದಂತೆ ಎಲ್ಲ ರೀತಿಯ ಸವಲತ್ತುಗಳನ್ನು ದೊರಕಿಸಿಕೊಡುವ ಕೆಲಸವನ್ನು ನ್ಯಾಯಾಧೀಶರು ಮುತವರ್ಜಿಯಿಂದ ನಿರ್ವಹಿಸಬೇಕಾಗುತ್ತದೆ. ಇದಕ್ಕಾಗಿ ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳ ಸಹಾಯವನ್ನು ನ್ಯಾಯಧೀಶರು ಪಡೆಯುತ್ತಾರೆ. ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿರುವರಿಗೆ ಎಲ್ಲಾ ರೀತಿಯ ಕಾನೂನು ಬದ್ದ ಹಕ್ಕುಗಳು ಲಭಿಸುತ್ತವೆ. ಇವರನ್ನು ತಾರತಮ್ಯದಿಂದ ನೋಡುವುದು ಸಮಾನತೆ ಹಕ್ಕಿನ ಉಲ್ಲಂಘನೆಯಾಗುತ್ತದೆ ಎಂದು ತಿಳಿಸಿದರು.

ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಮಾತನಾಡಿ, ರಾಷ್ಟ್ರೀಯ ಕಾನೂನು ಸೇವಗಳ ಪ್ರಾಧಿಕಾರದ ಅಡಿ, ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿರುವರಿಗೆ ಉಚಿತವಾಗಿ ಕಾನೂನು ಸಹಾಯ ಒದಗಿಸಲು 2024ರಲ್ಲಿ ಯೋಜನೆ ರೂಪಿಸಲಾಗಿದೆ. ಸರ್ವೋಚ್ಛ ನ್ಯಾಯಾಲಯದ ಎರಡನೇ ಮುಖ್ಯ ನ್ಯಾಯಾಮೂರ್ತಿಗಳು ಈ ಯೋಜನೆ ಅನುಷ್ಠಾನದ ನಿರ್ವಹಣೆ ಹಾಗೂ ಮೇಲುಸ್ತುವಾರಿ ನೋಡಿಕೊಳ್ಳುತ್ತಾರೆ ಎಂದರು.2017 ರಲ್ಲಿ ಕೇಂದ್ರ ಸರ್ಕಾರ ವಿಕಲಚೇತನರ ಹಕ್ಕುಗಳ ರಕ್ಷಣಾ ಕಾಯ್ದೆ ಹಾಗೂ ಮಾನಸಿಕ ಆರೋಗ್ಯ ರಕ್ಷಣೆ ಕಾಯ್ದೆಗಳನ್ನು ಜಾರಿ ಮಾಡಿದೆ. ಈ ಹಿನ್ನಲೆಯಲ್ಲಿ 2015 ರಲ್ಲಿ ಜಾರಿಯಲ್ಲಿದ್ದ ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿವರಿಗೆ ನೀಡುತ್ತಿದ್ದ ಕಾನೂನು ಸಹಾಯಗಳ ನಿಯಮಗಳನ್ನು ಪುನರ್ ರೂಪಿಸಿ ಸಂಯೋಜಿಸಲಾಗಿದೆ. ಸಂಬಂಧ ಪಟ್ಟ ಇಲಾಖೆಗಳನ್ನು ಸಹ ಹೊಸ ಯೋಜನೆಯಲ್ಲಿ ಭಾಗೀದರರನ್ನಾಗಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಯಾದವರು ಜಿಲ್ಲಾ ಮಟ್ಟದ ಸಮಿತಿಯ ಅಧ್ಯಕ್ಷರಾಗಿರುತ್ತಾರೆ. ನಿವೃತ್ತ ಜಿಲ್ಲಾ ನ್ಯಾಯಧೀಶರು, ವಕೀಲರು, ಕಾನೂನು ಸಹಾಯಕರು, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ, ಮಕ್ಕಳ ರಕ್ಷಣಾಧಿಕಾರಿ, ಜಿಲ್ಲಾ ಮಾನಸಿಕ ಆರೋಗ್ಯಾಧಿಕಾರಿಗಳನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ. ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಇರುವವರು ಉಚಿತ ಕಾನೂನು ಸೇವೆ ಪಡೆಯಲು ಅರ್ಹರಾಗಿರುತ್ತಾರೆ ಎಂದರು.

ಸಂವಿಧಾನ 14, 21 ಹಾಗೂ 22 ವಿಧಿಗಳು ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿದವರ ಹಕ್ಕುಗಳ ರಕ್ಷಣೆ ಬಗ್ಗೆ ತಿಳಿಸುತ್ತವೆ. ಸಂವಿಧಾನದ ವಿಧಿ 22 ಪ್ರಕಾರ ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕವೈಕಲ್ಯಹೊಂದಿವರುಕಡ್ಡಾಯವಾಗಿ ವಕೀಲರ ಮೂಲಕವೇ ನ್ಯಾಯಾಲಯದಲ್ಲಿ ವಿಚಾರಣೆ ಹಾಜರಾಗಬೇಕು. ಇದಕ್ಕಾಗಿ ನ್ಯಾಯಾಲಯವೇ ವಕೀಲರನ್ನು ನೇಮಿಸುತ್ತದೆ. ಮಾನಸಿಕ ಅಸ್ವಸ್ಥರು ಹಾಗೂ ಬೌದ್ದಿಕ ವೈಕಲ್ಯ ಹೊಂದಿದವರ 27 ವಿವಿಧ ಹಕ್ಕುಗಳ ರಕ್ಷಣೆಯನ್ನು ಈ ಯೋಜನೆ ಮೂಲಕ ಮಾಡಲಾಗುತ್ತದೆ ಎಂದು ನ್ಯಾ.ಎಂ.ವಿಜಯ್ ಹೇಳಿದರು.

ನಿವೃತ್ತ ನ್ಯಾಯಾಧೀಶ ನಾಡಿಗ ಜಯಸ್ವಾಮಿ ಕಾಯ್ದೆಗಳು ಹಾಗೂ ಯೋಜನೆ ಕುರಿತು ಉಪನ್ಯಾಸ ನೀಡಿದರು. ಜಿಲ್ಲಾ ಅಂಗವಿಕಲ ಕಲ್ಯಾಣಧಿಕಾರಿ ವೈಶಾಲಿ. ಜೆ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸೇರಿದಂತೆ ಮತ್ತಿರರು ಉಪಸ್ಥಿತರಿದ್ದರು.

# ದ್ವಿಚಕ್ರವಾಹನ ಸವಾರರಿಗೆ ಹೆಲ್ಮೇಟ್ ಧರಿಸಿ ಜಾಗೃತಿ ಮೂಡಿಸಿದ ಪೋಲೀಸ್ ಸಿಬ್ಬಂದಿ

» **ಚಳ್ಳಕೆರೆ**




ದ್ವಿಚಕ್ರವಾಹನ ಸವಾರರು ತಮ್ಮ ಪ್ರಾಣ ಸಂರಕ್ಷಣೆಗೆ ಕಡ್ಡಾಯವಾಗಿ ಬೈಕ್ ಚಾಲನಾ ಸಂದರ್ಭದಲ್ಲಿ ಹೆಲ್ಮೇಟ್ ಧರಿಸಬೇಕು. ಹೆಲ್ಮೇಟ್ ಧರಿಸಿ ವಾಹನ ಚಲಾಯಿಸಿದರೆ ಯಾವುದೇ ಅಪಘಾತವಾದರೂ ತಲೆಗೆ ಪೆಟ್ಟುಬೀಳುವುದು ಇದರಿಂದ ಜೀವ ಸಂರಕ್ಷಣೆಯಾಗುತ್ತದೆ ಎಂದು ಠಾಣಾ ವೃತ್ತ ನಿರೀಕ್ಷಕ ರಾಜಫ಼ಕೃದ್ದೀನ್‌ದೇಸಾಯಿ ತಿಳಿಸಿದರು.

ಅವರು, ಶುಕ್ರವಾರ ಪೋಲೀಸ್ ಠಾಣಾ ಆವರಣದಲ್ಲಿ ಸಾರ್ವಜನಿಕವಾಗಿ ಪ್ರತಿಯೊಬ್ಬರೂ ಬೈಕ್ ಚಾಲನೆ ಸಂದರ್ಭದಲ್ಲಿ ಹೆಲ್ಮೇಟ್‌ನ್ನು ಧರಿಸುವ ನಿಟ್ಟಿನಲ್ಲಿ ಪೋಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ಬೈಕ್ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಷ್ಟ್ರೀಯ ರಸ್ತೆ ಸುರಕ್ಷಿತ ಮಾಸ ಅಂಗವಾಗಿ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದು ಈಗಾಗಲೇ ಪೋಲೀಸ್ ಇಲಾಖೆ ಆಟೋಚಾಲಕರು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಲಾಗಿದೆ. ಸಡಕ್ ಸುರಕ್ಷ–ಜೀವನ್‌ರಕ್ಷ ಅಂಗವಾಗಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಿದೆ. ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳ ಜಾಗೃತಿ ಜಾಥವನ್ನು ನಡೆಸಲಾಗುವುದು ಎಂದರು.

ಪಿಎಸ್‌ಐ ಧರೆಪ್ಪಬಾಳಪ್ಪ ದೊಡ್ಡಮನಿ ಮಾತನಾಡಿ, ಬೈಕ್ ಜಾಥದಲ್ಲಿ ಪೋಲೀಸ್ ಇಲಾಖೆ ಎಲ್ಲಾ ಸಿಬ್ಬಂದಿ ಹೆಲ್ಮೇಟ್ ಧರಿಸಿ ಬೈಕ್ ಚಾಲನೆ ಮಾಡುವ ಮೂಲಕ ಸಾರ್ವಜನಿಕರಿಗೆ ಹೆಲ್ಮೇಟ್ ಧರಿಸುವಂತೆ ಜಾಗೃತಿ ಮೂಡಿಸುತ್ತಿದ್ಧಾರೆ. ಪೋಲೀಸ್ ಇಲಾಖೆಯೇ ಸಾರ್ವಜನಿಕವಾಗಿ ಹೆಲ್ಮೇಟ್ ಧರಿಸುವಂತೆ ಜನರ ಮನವಲಿಸುವ ಕಾರ್ಯ ನಿರಂತರವಾಗಿ ಮಾಡುತ್ತಾ ಬಂದಿದೆ. ಪೋಲೀಸರೇ ನಿಮ್ಮ ಮುಂದೆ ಹೆಲ್ಮೇಟ್ ಧರಿಸಿ ವಾಹನ ಚಲಾಯಿಸುವುದರಿಂದ ಸಾರ್ವಜನಿಕರು ಹೆಲ್ಮೇಟ್ ಧರಿಸಲು ಉತ್ಸಾಹ ಬರಲಿದೆ ಎಂದರು.

ಅಪಘಾತ ಪ್ರಕರಣಗಳನ್ನು ಅವಲೋಕಿಸಿದಾಗ ದ್ವಿಚಕ್ರವಾಹನ ಸವಾರರು ಹೆಲ್ಮೇಟ್ ಇಲ್ಲದೆ ಚಲಾವಣೆ ಮಾಡಿ ಅಪಘಾತ ಸಂದರ್ಭದಲ್ಲಿ ಪ್ರಾಣ ಕಳೆದುಕೊಂಡಿದ್ಧಾರೆ. ಕೆಲವರಲ್ಲಿ ಮಾತ್ರ ಹೆಲ್ಮೇಟ್ ಧರಿಸಲು ನಿರಾಸಕ್ತಿ ಇರುವುದು ಸರಿಯಲ್ಲ. ವಾಹನಸವಾರರು ಕಡ್ಡಾಯವಾಗಿ ಹೆಲ್ಮೇಟ್ ಧರಿಸಿ ಬೈಕ್ ಚಾಲನೆ ಮಾಡಬೇಕೆಂದು ಪೋಲೀಸ್ ಇಲಾಖೆ ಕಳಕಳಿ ಮನವಿ.

ಎಎಸ್‌ಐ ರವಿಕುಮಾರ್, ಮಂಜುನಾಥ,ಮುಖ್ಯಪೇದೇಗಳಾದ ವಸಂತಕುಮಾರ್, ಪರಶುರಾಮ, ಮಂಜಣ್ಣ, ಪೇದೆಗಳಾದ ಶಿವಾನಂದ ಮಡಿವಾಳ, ಕವಿತಾ, ಗಿರಿಯಮ್ಮ, ಹಾಲೇಶ್, ತಿಲಕ್, ರುದ್ರೇಶ್ ಮುಂತಾದವರು ಉಪಸ್ಥಿತರಿದ್ದರು.

### ದೇವಸ್ಥಾನದ ಭೂಮಿ ಪೂಜೆ ನೆರವೇರಿಸಿದ ಶಾಸಕ ರಘುಮೂರ್ತಿ



» **ಪರಶುರಾಂಪುರ**

ಹೋಬಳಿ ವ್ಯಾಪ್ತಿಯ ನಾಗಗೊಂಡನಹಳ್ಳಿ ಗ್ರಾಮದಲ್ಲಿ ಶುಕ್ರವಾರ ನಡೆದ ಕೂಡಲಸಂಗಮೇಶ್ವರ ದೇವಸ್ಥಾನದ ಭೂಮಿ ಪೂಜಾ ಕಾರ್ಯಕ್ರಮವನ್ನ ಶಾಸಕ ಟಿ.ರಘುಮೂರ್ತಿ ನೆರವೇರಿಸಿದರು. 2024–25ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಮಂಜುರಾದ 10 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವ ದೇವಸ್ಥಾನದ ಪೂಜಾ ಕೈಂಕರ್ಯಗಳಲ್ಲಿ ಪಾಲ್ಗೊಂಡು ಶಾಸಕ ಟಿ.ರಘುಮೂರ್ತಿ ಮಾತನಾಡಿ ಇಂದಿಗೂ ಐತಿಹಾಸಿಕ ಹಿನ್ನೆಲೆ ಜತೆ ಸಂಸ್ಕೃತಿ, ಸಾಹಿತ್ಯ ಬಿಂಬಿಸುವ ಆಚರಣೆ ಹಾಗೂ ದೇವತ ಕಾರ್ಯಗಳು ಗ್ರಾಮೀಣ ಭಾಗದಲ್ಲಿ ಕಾಣಬರುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ್, ನಿರ್ಮಿತಿ ಕೇಂದ್ರದ ಇಂಜಿನಿಯರ್ ಸಿದ್ದೇಶ್, ಅಧ್ಯಕ್ಷ ರಂಜನ್, ಗ್ರಾಮ ಪಂಚಾಯತ್ ಸದಸ್ಯರುಗಳು, ರೈತ ಸಂಘದ ಭೂತಯ್ಯ, ಮುಖಂಡರುಗಳಾದ ನರಸಿಂಹಪ್ಪ, ಚೆಲುಮೇಶ್, ರಂಗನಾಥ್, ರಂಗಪ್ಪ, ನಾಗರಾಜ್, ಮಂಜುನಾಥ್, ಜಗನ್ನಾಥ್, ಹೇಮಂತ್ ರಾಜ್, ರಂಗಪ್ಪ, ಹಂಪಣ್ಣ, ಸುರೇಶ್, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಮತ್ತು ರೈತ ಸಂಘದ ಪದಾಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಮಡಿವಾಳ ಮಾಚಿದೇವರ ಜಯಂತಿ

**ದಾವಣಗೆರೆ:** ವಚನ ಸಾಹಿತ್ಯ ರಕ್ಷಕ, ಗಣಾಚಾರ ಸಂಪನ್ನ, ಶರಣರ ದಂಡ ನಾಯಕ, ಬಸವಣ್ಣನವರ ಅನುಯಾಯಿಗಳಾದಿದ್ದ ವೀರಘಂಟೆ ಶ್ರೀ ಮಡಿವಾಳ ಮಾಚಿದೇವರ 910ನೇ ಜಯಂತಿ ಆಚರಣೆ ಫೆಬ್ರವರಿ1ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

### ಗ್ಯಾರಂಟಿ ಯೋಜನೆಗಳ ಜಿಲ್ಲಾ ಅಧ್ಯಕ್ಷ ಆರ್.ಶಿವಣ್ಣ ಮಾಹಿತಿ –ಗೃಹಲಕ್ಷ್ಮೀ ಯೋಜನೆ ನೊಂದಣಿಯಲ್ಲಿ ಜಿಲ್ಲೆ 3ನೇ ಸ್ಥಾನ

# ಇಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಕಚೇರಿ ಉದ್ಘಾಟನೆ

» **ಚಿತ್ರದುರ್ಗ**



ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮೀ ನೊಂದಣಿಯಲ್ಲಿ ಚಿತ್ರದುರ್ಗ ಜಿಲ್ಲೆ 3ನೇ ಸ್ಥಾನದಲ್ಲಿದೆ. ಉಳಿದ ಗ್ಯಾರಂಟಿ ಯೋಜನೆಗಳು ಸಹ ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನವಾಗುತ್ತಿವೆ. ಸಾರ್ವಜನಿಕರೊಂದಿಗೆ ಸಮನ್ವಯ ಸಾಧಿಸಿ ಅರ್ಹ ಫಲಾನುಭವಿಗಳಿಗೆ ಯೋಜನೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿರುವ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಸಮಿತಿಯ ಕಚೇರಿಯನ್ನು ನಗರದ ಜಿ.ಪಂ.ಕಚೇರಿ ಆವರಣದಲ್ಲಿ ಸ್ಥಾಪಿಸಲಾಗಿದ್ದು, ನೂತನ ಕಚೇರಿಯನ್ನು ಫೆ.01 ಶನಿವಾರದಂದು ಬೆಳಿಗ್ಗೆ 11 ಗಂಟೆಗೆ ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ಹೇಳಿದರು. ಈ ಕುರಿತು ಶುಕ್ರವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಉಪಾಧ್ಯಕ್ಷ ಸೂರಜ್ ಎಂ.ಎನ್.ಹೆಗಡೆ, ಸಂಸದ ಗೋವಿಂದ ಎಂ ಕಾರಜೋಳ ಈ ಸಂದರ್ಭದಲ್ಲಿ ಉಪಸ್ಥಿತರಿರುವರು. ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ, ಶಾಸಕರುಗಳಾದ ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಡಿ.ಟಿ.ಶ್ರೀನಿವಾಸ್, ಕೆ.ಎಸ್.ನವೀನ್, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರ ಸಭೆ ಅಧ್ಯಕ್ಷೆ ಬಿ.ಎಂ.ಸುಮಿರಾ ರಾಘವೇಂದ್ರ, ಪ್ರಾದೇಶಿಕ ಆಯುಕ್ತ ಆಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪೋಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅನುಷ್ಠಾನ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಜಿ.ಪಂ.ಸಿಇಓ ಸೋಮಶೇಖರ್ ಸೇರಿದಂತೆ ಪ್ರಾಧಿಕಾರದ ಜಿಲ್ಲಾ ಸಮಿತಿಯ ಉಪಾಧ್ಯಕ್ಷರು, ಸದಸ್ಯರು, ತಾಲ್ಲೂಕು ಅನುಷ್ಠಾನ ಸಮಿತಿಯ ಅಧ್ಯಕ್ಷರು, ಕಾರ್ಯದರ್ಶಿಗಳು ಪಾಲ್ಗೊಳ್ಳುವರು ಎಂದು ಆರ್.ಶಿವಣ್ಣ ತಿಳಿಸಿದರು.

**ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜಿಲ್ಲಾ ಪಕ್ಷಿನೋಟ:** ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ 3,78,084 ಫಲಾನುಭವಿಗಳ ಮನೆಗಳಿಗೆ 200 ಯುನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಇದಕ್ಕಾಗಿ ಪ್ರತಿ ತಿಂಗಳು ಸರಿ ಸುಮಾರು ರೂ.14 ಕೋಟಿ ವ್ಯಯಿಸಲಾಗುತ್ತಿದೆ. ಕಳೆದ 17 ತಿಂಗಳಿನಲ್ಲಿ ರೂ.234 ಕೋಟಿ ಅಧಿಕ ಹಣವನ್ನು ಯೋಜನೆಗಾಗಿ ಸರ್ಕಾರ ಬಿಡುಗಡೆ ಮಾಡಿದೆ. ಗೃಹಲಕ್ಷ್ಮೀ ಯೋಜನೆಯಡಿ 3,96,025 ಫಲಾನುಭವಿಗಳಿಗೆ ಪ್ರತಿ ತಿಂಗಳು ಡಿಬಿಟಿ ಮೂಲಕ ರೂ.2000 ಖಾತೆಗೆ ಜಮೆ ಮಾಡಲಾಗುತ್ತಿದೆ. ಇದರ ಮೊತ್ತ ರೂ.1092 ಕೋಟಿಗೂ ಅಧಿಕವಾಗಿದೆ. ಅನ್ನಭಾಗ್ಯ ಯೋಜನೆಯಡಿ 3,65,890 ಫಲಾನುಭವಿಗಳಿಗೆ 7014 ಮೆಟ್ರಿಕ್ ಟನ್ ಅಕ್ಕಿ ನೀಡಲಾಗಿದೆ. 5 ಕೆ.ಜಿ ಅಕ್ಕಿ ಪರ್ಯಾಯವಾಗಿ ರೂ.170 ರಂತೆ ಎಲ್ಲಾ ಅರ್ಹ ಫಲಾನುಭವಿಗಳ ಖಾತೆಗೆ ರೂ.20 ಕೋಟಿ ಜಮೆ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಚಿತ್ರದುರ್ಗ ವಿಭಾಗದ ಬಸ್‌ಗಳಲ್ಲಿ ಪ್ರತಿನಿತ್ಯ 62,000 ಕ್ಕೂ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಮಾಡುತ್ತಿದ್ದಾರೆ. ಇದಕ್ಕಾಗಿ ರೂ.147.13 ಕೋಟಿ ಹಣವನ್ನು ಕೆ.ಎಸ್.ಆರ್.ಟಿ.ಸಿ ಸಂಸ್ಥೆಗೆ ಸರ್ಕಾರ ಪಾವತಿಸಿದೆ. ಜಿಲ್ಲೆಯಲ್ಲಿ 26,086 ಪದವಿ ಹಾಗೂ 291 ಡಿಪ್ಲೋಮೊವ್ಯಾಸಾಂಗಪೂರ್ಣಗೊಳಿಸಿದ ಯುವಕರು ಯುವನಿಧಿಯಡಿ ನೊಂದಣಿ ಮಾಡಿಕೊಂಡಿದ್ದಾರೆ. ಪದವಿ ವಿದ್ಯಾಭ್ಯಾಸ ಪೂರ್ಣಗೊಳಿಸಿದವರಿಗೆ ರೂ.3000 ಹಾಗೂ ಡಿಪ್ಲೋಮೊ ಮುಗಿಸಿದವರಿಗೆ ರೂ.1,500 ಮಾಸಿಕ ನಿರುದ್ಯೋಗ ಭತ್ಯ ನೀಡಲಾಗುತ್ತಿದೆ. ಇದುವರೆಗೂ ರೂ.7.8 ಕೋಟಿ ಯುವನಿಧಿಯಡಿ ಫಲಾನುಭವಿಗಳಿಗೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು. ಜಿ.ಪಂ.ಸಿಇಓ ಸೋಮಶೇಖರ್ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಜಿ.ಪಂ.ಸಿಪಿಓ ಗಾಯತ್ರಿ, ಜಿಲ್ಲಾ ಸಮಿತಿಯ ಉಪಾಧ್ಯಕ್ಷರಾದ ಡಿ.ಎನ್.ಮೈಲಾರಪ್ಪ, ಖಾದಿ.ಜೆ.ರಮೇಶ್, ನಾಗೇಶ್ ರೆಡ್ಡಿ, ಸದಸ್ಯರಾದ ಅಬ್ದುಲ್ಲಾ ಶಾ ವಲಿ, ಟಿ.ಕೃಷ್ಣಮೂರ್ತಿ, ಮದಸೀರ್ ನವಾಜ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಇಂದು ಮರುಳಶಂಕರ ದೇವರ ಜಯಂತಿ



» ಚಿತ್ರದುರ್ಗ

ಹನ್ನೆರಡನೆಯ ಶತಮಾನದಲ್ಲಿ ಬಸವಣ್ಣನವರ ಸಮಾಜೋಧಾರ್ಮಿಕ ಕಾರ್ಯಗಳಿಂದ ಪ್ರಭಾವಿತರಾಗಿ ಅಫ್ಘಾನಿಸ್ತಾನದಿಂದ ಬಂದು ಶರಣಗಣದಲ್ಲಿ ಕೂಡಿಕೊಂಡು ಸಾಧನೆಯನ್ನು ಮಾಡಿದ ಶಿವಶರಣ ಶ್ರೀ ಮರುಳಶಂಕರದೇವರ ಜಯಂತಿಯನ್ನು ಫೆಬ್ರವರಿ 1ರಂದು ಬೆಳಗ್ಗೆ 8:30 ಕ್ಕೆ ಚಿತ್ರದುರ್ಗದ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಮುರಿಗೆಯ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾ ವಿಶ್ರಾಂತಿ ತಾಣದ ಮುಂಭಾಗದಲ್ಲಿ ಆಯೋಜಿಸಲಾಗಿದೆ.ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿಯ ಅಧ್ಯಕ[illegible]ರಾದ ಶಿವಯೋಗಿ.ಸಿ. ಕಳಸದ ಅವರ ಅಧ್ಯಕ್ಷತೆಯಲ್ಲಿ, ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳವರ ಸಾನಿಧ್ಯದಲ್ಲಿ, ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ನಡೆಯಲಿದೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

### ಹೊರಗುತ್ತಿಗೆ ನೌಕರರಿಂದ ಸದಸ್ಯತ್ವಕ್ಕೆ ಅರ್ಜಿ

» ದಾವಣಗೆರೆ

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಗೂ ವಿವಿಧ ನಿಗಮ, ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆಯಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು, ಕಾರ್ಮಿಕರಿಗೆ ವೇತನ ಪಾವತಿ ಮತ್ತು ಕಾನೂನಾತ್ಮಕವಾಗಿ ನೀಡಬೇಕಾದ ಸೌಲಭ್ಯಗಳನ್ನು ಒದಗಿಸುವ ಸಲುವಾಗಿ ದಾವಣಗೆರೆ ಜಿಲ್ಲಾ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಹಕಾರ ಸಂಘ ನಿಗಮವನ್ನು ನೂತನವಾಗಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ. ಈ ನೌಕರರಿಗೆ ಜಿಲ್ಲಾ ಸಂಘದಿಂದಲೇ ನೇರವಾಗಿ ವೇತನ ಹಾಗೂ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಹೊರಗುತ್ತಿಗೆ ನೌಕರರೇ ಈ ಸಹಕಾರ ಸಂಘದ ಸದಸ್ಯರಾಗಿರುವರು. ಆದ್ದರಿಂದ ಹೊರಗುತ್ತಿಗೆ ನೌಕರ ಸಿಬ್ಬಂದಿಯವರು ಸಂಘದ ಸದಸ್ಯತ್ವ ಪಡೆಯಬಹುದಾಗಿದ್ದು ತಮ್ಮ ಇಲಾಖೆ ಮುಖ್ಯಸ್ಥರುಗಳಿಂದ ಅರ್ಜಿ ಪಡೆದು ನೊಂದಣಿ ಮಾಡಿಕೊಳ್ಳಲು ತಿಳಿಸಿದ್ದಾರೆ

### ಅರ್ಜಿ ಆಹ್ವಾನ

» ವಿಜಯನಗರ

2025 ನೇ ಸಾಲಿನ ಹಂಪಿ ಉತ್ಸವ ಫೆ.28 ಮತ್ತು ಮಾ.01, 02 ರಂದು ನಡೆಯಲಿರುವ ಹಿನ್ನಲೆಯಲ್ಲಿ ವಿವಿಧ ಮಳಿಗೆಗಳನ್ನು ಸಿದ್ದಪಡಿಸಿ ವಸ್ತು ಪ್ರದರ್ಶನಕ್ಕಾಗಿ ವ್ಯವಸ್ಥೆಯನ್ನು ಮಾಡಲಾಗಿದೆ. ವಸ್ತುಪ್ರದರ್ಶನದಲ್ಲಿ ಮಳಿಗೆ ಕಾಯ್ದಿರಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಹಂಪಿ ಉತ್ಸವದ ವಸ್ತು ಪ್ರದರ್ಶನ ಉಪ ಸಮಿತಿಯ ಅಧ್ಯಕ್ಷರು ಹಾಗೂ ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಬಿ.ಶರಣಪ್ಪ ಮುದಗಲ್ ತಿಳಿಸಿದ್ದಾರೆ. ಹಂಪಿ ಉತ್ಸವದಲ್ಲಿ 10*10 ಅಡಿ ಅಳತೆಯ ಮಳಿಗೆಗಳನ್ನು ವಸ್ತು ಪ್ರದರ್ಶನಕ್ಕಾಗಿ ಮುಂಗಡವಾಗಿ ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿದೆ. ಕಾಯ್ದಿರಿಸುವವರು ಅರ್ಜಿಯೊಂದಿಗೆ ಅಧ್ಯಕ್ಷರು, ಹಂಪಿ ಉತ್ಸವ, ವಿಜಯನಗರ ಇವರ ಹೆಸರಿನಲ್ಲಿ ರೂ.5000 ಮೊತ್ತದ ಡಿ.ಡಿ.ಯನ್ನು ಫೆ.15, ಸಂಜೆ 5.30 ರೊಳಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಸೆಂಟರ್ ಆಫ್ ಎಕ್ಸೆಲ್ನ್ಸ್ ಕಟ್ಟಡ, ನ್ಯಾಷನಲ್ ಕಾಲೇಜ್ ಹಿಂಭಾಗ, ಎನ್.ಸಿ.ಕಾಲೋನಿ ಹರಿಹರ ರಸ್ತೆ, ಹೊಸಪೇಟೆ–583203 ಈ ವಿಳಾಸಕ್ಕೆ ತಲುಪಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಅನಿಲ ಕುಮಾರ್ ಮೊ.9449135765 ಮೊಬೈಲ್ ಗೆ ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಮಹಾತ್ಮ ಗಾಂಧೀಜಿ ಪ್ರತಿಮೆಗೆ ಗೌರವಾರ್ಪಣೆ

» ಚಿಕ್ಕಮಗಳೂರು

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಹುತಾತ್ಮ ದಿನದ ಅಂಗವಾಗಿ ಜಿಲ್ಲಾಡಳಿತದಿಂದ ಜಿಲ್ಲಾಧಿಕಾರಿಗಳ ಕಛೇರಿ ಒಳಾವರಣದಲ್ಲಿರುವ ರಾಷ್ಟ್ರಪಿತನೆನಪಿನಂಗಳದಲ್ಲಿಹುತಾತ್ಮರದಿನಾಚರಣೆ ಆಚರಿಸಲಾಯಿತು. ಮಹಾತ್ಮ ಗಾಂಧೀಜಿ ಪ್ರತಿಮೆಗೆ ಗಣ್ಯರು ಪುಷ್ಪ ನಮನ ಸಲ್ಲಿಸಿದರು. ಒಂದು ನಿಮಿಷ ಮೌನ ಆಚರಿಸಲಾಯಿತು. ಎಂ.ಇ.ಎಸ್. ಪ್ರೌಢಶಾಲೆಯ ವಿದ್ಯಾರ್ಥಿಗಳು ಹಾಗೂ ಸುರೇಂದ್ರ ನಾಯಕ್ ಅವರು ಗಾಂಧೀಜಿಯವರಿಗೆ ಪ್ರಿಯವಾದ ರಘುಪತಿ ರಾಘವ, ವೈಷ್ಣವ ಜನತೋ ಭಜನೆ ಹಾಡಿದರು. ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್, ನಗರಸಭೆ ಉಪಾಧ್ಯಕ್ಷೆ ಅನುಮಧುಕರ್, ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಟೆ, ಅಪರ ಜಿಲ್ಲಾಧಿಕಾರಿ ನಾರಾಯಣರಡ್ಡಿ ಕನಕರಡ್ಡಿ, ತಹಸೀಲ್ದಾರ್ ಡಾ. ಸುಮಂತ್, ನಗರಸಭೆ ಪೌರಾಯುಕ್ತ ಬಸವರಾಜು, ವಿವಿಧ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

"ಡಾ.ಬಿ.ಆರ್.ಅಂಬೇಡ್ಕರ್ ಓದು" ಕಾರ್ಯಕ್ರಮದಲ್ಲಿ ಪ್ರೊ.ಜೆ.ಕರಿಯಪ್ಪ ಮಾಳಿಗೆ

# ದೌರ್ಬಲ್ಯಗಳ ನಿವಾರಣೆಗೆ ಅಂಬೇಡ್ಕರ್ ಓದು ಅವಶ್ಯ

» ಚಿತ್ರದುರ್ಗ

ನಮ್ಮ ದೌರ್ಬಲ್ಯಗಳ ನಿವಾರಣೆಗಾಗಿ ಅಂಬೇಡ್ಕರ್ ಓದು ಅವಶ್ಯಕವಾಗಿದೆ. ಅಂಬೇಡ್ಕರ್ ಅಂದರೆ ಶಕ್ತಿ, ಮಾನವತ್ವ, ಮಾನವೀಯತೆ ಹಾಗೂ ಎಲ್ಲಕ್ಕಿಂತಲೂ ಮುಖ್ಯವಾಗಿ ಮನುಷ್ಯ ಪ್ರೀತಿ ಎಂದು ಸರ್ಕಾರಿ ಕಲಾ ಕಾಲೇಜು ಸ್ನಾತಕೋತ್ತರ ಕನ್ನಡ ವಿಭಾಗದ ಮುಖ್ಯಸ್ಥರು ಹಾಗೂ ಕುವೆಂಪು ಭಾಷಾ ಭಾರತಿ ಸದಸ್ಯ ಪ್ರೊ. ಜೆ.ಕರಿಯಪ್ಪ ಮಾಳಿಗೆ ಹೇಳಿದರು.

ನಗರದ ಸರ್ಕಾರಿ ಕಲಾ ಕಾಲೇಜು ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಶುಕ್ರವಾರ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ "ಡಾ.ಬಿ.ಆರ್.ಅಂಬೇಡ್ಕರ್ ಓದು" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ಅಲೋಚನೆಗಳು, ಚಿಂತನೆಗಳನ್ನು ಕೊಂಡ್ಯೊಯುವ ದೊಡ್ಡ ಜವಾಬ್ದಾರಿ ವಿದ್ಯಾರ್ಥಿಗಳ ಮೇಲಿದೆ. ಅಂಬೇಡ್ಕರ್ ಯಾವುದೇ ಒಂದು ಜಾತಿ, ಧರ್ಮ, ಸಮುದಾಯಕ್ಕೆ ಸೀಮಿತರಾದವರು ಅಲ್ಲ. ಅಂಬೇಡ್ಕರ್ ಮಾನವೀಯತೆಗೆ ಸೀಮಿತರಾದವರು ಎಂದು ಅಭಿಪ್ರಾಯಪಟ್ಟರು.

ಅಂಬೇಡ್ಕರ್ ಇಡೀ ವಿಶ್ವಕ್ಕೆ ಜ್ಞಾನ, ಬೆಳಕಾಗಿದ್ದು, ನಾವು ಆ ಬೆಳಕನ್ನು ಕಾಣಬೇಕಿದೆ. ಹಾಗಾಗಿ ಅಂಬೇಡ್ಕರ್ ಅವರ ಜ್ಞಾನ ತುಂಬಾ ಮುಖ್ಯ. ನಮ್ಮೊಳಗಿನ ಶಕ್ತಿ ತೋರಿಸುವವರು ಹಾಗೂ ಪ್ರಜ್ಞೆಯನ್ನು ಎಚ್ಚರಗೊಳಿಸುವ ಜಾಗೃತಿ ಅಂಬೇಡ್ಕರ್ ಎಂದರು.

ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಂಬೇಡ್ಕರ್ ಓದು ಎಂಬುವುದು ಒಂದು ಚೇತನ ಹಾಗೂ ಶಕ್ತಿಯನ್ನು ನೀಡುವ ಶಿರೋನಾಮೆಯಾಗಿದೆ. ಅಂಬೇಡ್ಕರ್ ಅವರು ವಿಶ್ವದ ಅನೇಕ ರಾಷ್ಟ್ರಗಳಿಗೆ ಭೇಟಿ ನೀಡಿ, ವಿವಿಧ ಸಂವಿಧಾನಗಳನ್ನು ಅಧ್ಯಯನ ಮಾಡುವ ಮೂಲಕ ದೇಶಕ್ಕೆಎ ಉತ್ತಮವಾದ ಸಂವಿಧಾನವನ್ನು ನಮಗೆ ತಂದುಕೊಟ್ಟಿದ್ದಾರೆ ಎಂದು ತಿಳಿಸಿದ ಅವರು, ಈ ದೇಶದಲ್ಲಿ ಅಸಮಾನತೆ, ಅಸಹನೆ, ಕೋಮುವಾದ, ಮನುವಾದ ಎಲ್ಲಿಯವರೆಗೆ ಇರುತ್ತದೆಯೋ ಅಲ್ಲಿಯವರೆಗೂ ಸಹ ಅಂಬೇಡ್ಕರ್ ನಿಲುವು, ಸಿದ್ಧಾಂತ ಅಗತ್ಯ ಎಂದು ಹೇಳಿದರು.

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕ ಡಾ.ಜೆ.ಮೋಹನ್ ಉಪನ್ಯಾಸ ನೀಡಿ, ನಮಗೆ ಜೀವ ಕೊಟ್ಟವರು ತಾಯಿ–ತಾಯಿಗಳಾದರೆ, ಬದುಕಿಗೆ ಬೆಳಕಾದವರು ಡಾ.ಬಿ.ಆರ್.ಅಂಬೇಡ್ಕರ್ ಎಂಬ ಅರಿವು ಪ್ರತಿಯೊಬ್ಬರಿಗೂ ಇರಬೇಕು ಎಂದು ಹೇಳಿದರು. ಡಾ.ಬಿ.ಆರ್. ಅಂಬೇಡ್ಕರ್ ರಚಿಸಿದ ಸಂವಿಧಾನ ಜೀವಪರ, ಮನುಷ್ಯಪರವಾದುದು. ಸಂವಿಧಾನವನ್ನು ಸಮಗ್ರವಾಗಿ ಅಧ್ಯಯನ ಮಾಡಿ ನೋಡಿದಾಗ ಎಲ್ಲಿಯೂ ಕೂಡ ಒಂದು ಜಾತಿ, ಧರ್ಮ, ವರ್ಗವನ್ನು ಹೇಳಿಲ್ಲ. ಪ್ರತಿಯೊಬ್ಬರು ಸಹ ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವದಿಂದ ಬದುಕಬೇಕು ಎಂಬ ಆಶಯವನ್ನು ಸಂವಿಧಾನ ಹೊಂದಿದೆ ಎಂದು ಹೇಳಿದರು.



ವಕೀಲ ಎಂ.ರಮೇಶ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಮಾತನಾಡಿದರು. ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಲೀಲಾವತಿ ಅವರು ಸಂವಿಧಾನ ಪೀಠಿಕೆ ಬೋಧಿಸಿದರು.

ಅಂಬೇಡ್ಕರ್ ಓದು ಕಾರ್ಯಕ್ರಮದ ಅಂಗವಾಗಿ ರಸಪ್ರಶ್ನೆ, ಪ್ರಬಂಧ, ಆಶುಭಾಷಣ ಹಾಗೂ ಕವನ ವಾಚನ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಸರ್ಕಾರಿ ಕಲಾ ಕಾಲೇಜು ಐಕ್ಯೂಎಸಿ ಸಂಚಾಲಕರಾದ ಪ್ರೊ.ಆರ್.ತಾರಿಣಿ ಶುಭದಾಯಿನಿ, ಪರೀಕ್ಷಾ ನಿಯಂತ್ರಕ ಡಾ.ಬಿ.ಸುರೇಶ, ಕಾಲೇಜು ಅಧ್ಯಾಪಕರ ಸಂಘ ಕಾರ್ಯದರ್ಶಿ ಡಾ.ಆರ್.ಗಂಗಾಧರ, ಇತಿಹಾಸ ವಿಭಾಗದ ಮುಖ್ಯಸ್ಥ ಡಾ.ಆರ್.ಶಿವಪ್ಪ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಗಿರೀಶ್ ನಾಯಕ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಶ್ಯಾಮ್ ರಾಜ್ ಸೇರಿದಂತೆ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿಗಳು ಇದ್ದರು.

# ಸ್ವಾಭಿಮಾನಕ್ಕೆ ಬಡತನ ಇರಬಾರದು, ಶ್ರೀಮಂತಿಕೆ ಇರಬೇಕು: ಜಿ.ಬಿ.ವಿನಯ್ ಕುಮಾರ್ ಸಲಹೆ

» ದಾವಣಗೆರೆ

ಪ್ರತಿಯೊಬ್ಬರೂ ಪುಸ್ತಕಗಳನ್ನು ಓದುವ ಮೂಲಕ ಜ್ಞಾನ ಸಂಪಾದಿಸಿಕೊಳ್ಳಿ. ಜ್ಞಾನ ಮತ್ತು ಒಳ್ಳೆಯ ಶಿಕ್ಷಣ ಪಡೆಯುವ ಮೂಲಕ ಸ್ವತಂತ್ರ ಮತ್ತು ಧೈರ್ಯದಿಂದ ಸ್ವಾವಲಂಬಿಗಳಾಗಿ ಬದುಕಬೇಕು. ಯಾರಮುಂದೆಯೂಕೈಚಾಚಬೇಡಿ. ಇಂದಿನ ಪ್ರಪಂಚದಲ್ಲಿ ಜ್ಞಾನ, ಶಿಕ್ಷಣ, ತಂತ್ರಜ್ಞಾನ ಸೇರಿದಂತೆ ಎಲ್ಲವೂ ಲಭ್ಯವಿದೆ. ಬೇಕಾಗಿರುವುದು ಗಟ್ಟಿ ಮನಸ್ಸು. ಸ್ವಾಭಿಮಾನಕ್ಕೆ ಬಡತನ ಇರಬಾರದು, ಶ್ರೀಮಂತಿಕೆ ಇರಬೇಕು ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ಜಿ. ಬಿ. ವಿನಯ್ ಕುಮಾರ್ ಸಲಹೆ ನೀಡಿದರು.

ಜಗಳೂರು ಪಟ್ಟಣದ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಸಮಾನ ಮನಸ್ಕರ ಬಳಗದ ಆಶ್ರಯದಲ್ಲಿ ಏರ್ಪಡಿಸಿದ್ದ ಸ್ವಾಮಿ ವಿವೇಕಾನಂದ ಜಯಂತ್ಯೋತ್ಸವ, ರಾಷ್ಟ್ರೀಯ ಯುವಕರ ದಿನದ ಪ್ರಯುಕ್ತ ಸ್ವಯಂಪ್ರೇರಿತ ರಕ್ತದಾನ ಶಿಬಿರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಜೀವನದಲ್ಲಿ ಎಷ್ಟೇ ಕಷ್ಟಬಂದರೂ ದೊಡ್ಡ ಕನಸು ಕಾಣಬೇಕು. ನಾನು ದಾವಣಗೆರೆಯ ಕಕ್ಕರಗೊಳ್ಳದವನು. ಪುಟ್ಟ ಹಳ್ಳಿಯಿಂದ ಬಂದವನು. ಕಷ್ಟದಲ್ಲಿಯೇ ಓದಿ ಇನ್ ಸೈಟ್ಸ್ ಸಂಸ್ಥೆ ಸ್ಥಾಪನೆ ಮಾಡಿದ್ದು. ಇಂದು ದೇಶಾದ್ಯಂತ ದೊಡ್ಡದಾಗಿ ಬೆಳೆದಿದೆ. ದೇಶದ 65 ಜಿಲ್ಲೆಗಳಲ್ಲಿ ನನ್ನ ವಿದ್ಯಾರ್ಥಿಗಳು ಡಿಸಿಗಳಾಗಿದ್ದಾರೆ, ಜಿಲ್ಲಾ ಪಂಚಾಯಿತಿ ಸಿಇಒಗಳಾಗಿದ್ದಾರೆ. ಸುಮಾರು 50 ಜಿಲ್ಲೆಗಳಲ್ಲಿ ಎಸ್ಪಿಗಳಾಗಿದ್ದಾರೆ. ಒಟ್ಟು 500ರಿಂದ 550 ವಿದ್ಯಾರ್ಥಿಗಳು ಉನ್ನತ ಹುದ್ದೆಯಲ್ಲಿದ್ದಾರೆ. ಇದೆಲ್ಲಾ ಸಾಧ್ಯವಾಗಿದ್ದು ಮನಸ್ಸಿದ್ದರೆ ಮಾರ್ಗ ಎಂಬ ನಾಣ್ನುಡಿಯಂತೆ ಕಷ್ಟಪಟ್ಟಿದ್ದು, ಪುಸ್ತಕಗಳ ಜ್ಞಾನದಿಂದ ಎಂದು ತಿಳಿಸಿದರು.



ಉತ್ತರ ಪ್ರದೇಶದ ಪ್ರಯಾಗ್ ರಾಜ್ ನಲ್ಲಿ ಕಾಲ್ತುಳಿತ ಸಂಭವಿಸಿ ಸಾವು ಸಂಭವಿಸಿದೆ. ಮಹಾಕುಂಭ ಮೇಳವು ವಿಶ್ವದ ಗಮನ ಸೆಳೆದಿದೆ. ಪ್ರಯಾಗ್ ರಾಜ್ ನ ಪಕ್ಕದ ಜಿಲ್ಲೆಯ ಅಯೋಧ್ಯೆಯಲ್ಲಿ ಸಿಇಒ ಆಗಿರುವುದು ಜಯದೇವ್ ಅವರು ನನ್ನ ಸಂಸ್ಥೆಯ ವಿದ್ಯಾರ್ಥಿ. ಹಾಗಾಗಿ, ಬಡತನ ಇದ್ದರೂ ದೊಡ್ಡ ಕನಸು ಕಾಣುವುದನ್ನು ರೂಢಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಸ್ವಾಭಿಮಾನ ಬಿಡಬೇಡಿ ಎಂದು ಸಲಹೆ ನೀಡಿದರು.

ಡಾ. ಬಿ. ಆರ್. ಅಂಬೇಡ್ಕರ್ ರವರ ಬರವಣಿಗೆಯಲ್ಲಿ ಸ್ವಾಭಿಮಾನ ಮತ್ತು ಘನತೆ ಪದಗಳು ಪದೇ ಪದೇ ಪುನರಾವರ್ತನೆ ಆಗಿವೆ. ಭಾರತ ದೇಶದ ಪ್ರತಿಯೊಬ್ಬ ವ್ಯಕ್ತಿಯ ಘನತೆ ಮತ್ತು ಸ್ವಾಭಿಮಾನಕ್ಕೆ ಧಕ್ಕೆ ಬರಬಾರದು ಎಂಬುದೇ ಸಂವಿಧಾನದ ಮೂಲ ಉದ್ದೇಶ. ಇಂಥ ವ್ಯವಸ್ಥೆ ಸೃಷ್ಟಿಯಾಗಬೇಕು. ಅಸಮಾನತೆ ತೊಲಗಬೇಕು ಎಂದು ಪ್ರತಿಪಾದಿಸಿದರು.

ಅಸಮಾನತೆ ಹೋಗಬೇಕಾದರೆ ಜ್ಞಾನ, ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಚಿಕ್ಕ ವಯಸ್ಸಿನಿಂದಲೇ ಪುಸ್ತಕಗಳನ್ನು ಓದುವ ಹವ್ಯಾಸ ರೂಢಿಸಿಕೊಂಡರೆ ಜ್ಞಾನ ಬರುತ್ತದೆ. ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ಸಿಕ್ಕರೆ ಉನ್ನತ ಹುದ್ದೆ ಅರಸಿ ಬರುತ್ತವೆ ಎಂದು ತಿಳಿಸಿದರು.

1891ರಲ್ಲಿ ಅಂಬೇಡ್ಕರ್ ಅವರು ಜನಿಸಿದಾಗ ಅವರ ತಂದೆ ತಾಯಿಗೆ 14ನೇ ಮಗು. ಆಗಿನ ಸಾಮಾಜಿಕ ಪರಿಸ್ಥಿತಿ ಊಹಿಸಿಕೊಳ್ಳಲು ಆಗದು. ಯಾಕೆಂದರೆ ಆಗ ಪ್ರತಿಯೊಬ್ಬರೂ ಸಾಮಾಜಿಕ, ಶೈಕ್ಷಣಿಕವಾಗಿ ಕೆಳವರ್ಗದವರಿಗೆ ಸಿಗದಂತೆ ಮಾಡಲಾಗಿತ್ತು. ಇದನ್ನು ಮೆಟ್ಟಿ ನಿಂತು ಬೆಳೆದಿದ್ದು ಅಂಬೇಡ್ಕರ್ ಅವರು. ಅಂಬೇಡ್ಕರ್ ಅವರು ನಿಧನ ಹೊಂದಿದಾಗ ಅವರ ಬಳಿ ಇದ್ದದ್ದು 50 ಸಾವಿರ ಪುಸ್ತಕಗಳು. ಪುಸ್ತಕ ಓದುವ ಹವ್ಯಾಸವೇ ಅಂಬೇಡ್ಕರ್ ಅವರ ಜ್ಞಾನ ಭಂಡಾರ ಹೆಚ್ಚಾಗಲು ಕಾರಣ. ಪದವಿ ಪೂರ್ಣಗೊಳಿಸುವುದರೊಳಗೆ 100ರಿಂದ 200 ಪುಸ್ತಕ ಖರೀದಿಸಿ ಓದಿ. ಕಡುಬಡತನ ಇದ್ದರೂ ಪ್ರತಿಭೆ ಜ್ಞಾನ ಗುರುತಿಸುವಂತಾಗುತ್ತದೆ ಎಂದು ಸಲಹೆ ನೀಡಿದರು.

ಸಮಾನ ಮನಸ್ಕರ ಬಳಗದ ಅಧ್ಯಕ್ಷ ಬಿಸ್ತುವಳ್ಳಿ ಬಾಬು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಡಾ. ಟಿ. ಜಿ. ರವಿಕುಮಾರ್, ಪ್ರದೀಪ್ ಕುಮಾರ್, ಶೌಖತ್ ಅಲಿ, ಕೀರ್ತಿ ದೇವೇಂದ್ರಪ್ಪ, ಮಹಾಲಿಂಗಪ್ಪ, ಬರ್ಕತ್ ಅಲಿ, ಸತೀಶ್ ಮತ್ತಿತರರು ಹಾಜರಿದ್ದರು.

### ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಲು ಚಿತ್ರಕಲಾ ಪ್ರದರ್ಶನಗಳು ಉಪಯುಕ್ತ



» ಚಿತ್ರದುರ್ಗ

ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ ಹೊರತೆಗೆಯುವಲ್ಲಿ ಚಿತ್ರಕಲಾ ಪ್ರದರ್ಶನಗಳು ಉಪಯುಕ್ತವಾಗಲಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿಎಸ್.ನಾಗಭೂಷಣ್ ತಿಳಿಸಿದರು. ಡಾನ್‌ಬೋಸ್ಕೋ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ನಡೆದ ಚಿತ್ರಕಲಾ ಪ್ರದರ್ಶನ ವೀಕ್ಷಿಸಿ ನಂತರ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಮಕ್ಕಳಲ್ಲಿ ಚಿತ್ರಕಲೆ ಪ್ರವೃತ್ತಿಯನ್ನು ಬೆಳೆಸಲು ಚಿತ್ರಕಲಾ ಪ್ರದರ್ಶನಗಳು ಅತ್ಯುತ್ತಮ ವೇದಿಕೆ. ಇದರ ಪ್ರಯೋಜನ ಪಡೆದುಕೊಂಡು ಮಕ್ಕಳು ತಮ್ಮಲ್ಲಿರುವ ಕಲೆಯನ್ನು ಅರಳಿಸಬೇಕು. ಚಿತ್ರಕಲೆ ವಿಶ್ವ ಭಾಷೆಯಾಗಿರುವುದರಿಂದ ಯಾರು ಬೇಕಾದರೂ ಸುಲಭವಾಗಿ ಅರ್ಥಮಾಡಿಕೊಳ್ಳಬಹುದೆಂದರು. ಚಿತ್ರಕಲಾ ಶಿಕ್ಷಕ ಪ್ರಸನ್ನಕುಮಾರ್ ಮಾತನಾಡಿ ಚಿತ್ರಕಲೆ ಮನುಷ್ಯನ ಭಾವನೆಗಳ ಪ್ರತೀಕ ಎಂದು ಹೇಳಿದರು.ಚಿತ್ರಕಲಾ ಶಿಕ್ಷಕ ವೆಂಕಟೇಶ್, ಡಾನ್‌ಬೋಸ್ಕೋ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಪ್ರಾಂಶುಪಾಲರಾದ ಫಾದರ್ ಉದಯ್‌ಕುಮಾರ್, ಫಾದರ್ ಮ್ಯಾಥ್ಯು, ಫಾದರ್ ಜಾನ್‌ಪಾಲ್, ನಿರ್ದೇಶಕ ಫಾದರ್ ಸಜ್ಜಿಜಾರ್ಜ್ ಈ ಸಂದರ್ಭದಲ್ಲಿದ್ದರು.

### ಫೆ.1ಕ್ಕೆ ಸಾಸ್ವೆಹಳ್ಳಿಯಲ್ಲಿ ಎಡಿವಿಸ್ ವಾರ್ಷಿಕೋತ್ಸವ ಸಮಾರಂಭ

ದಾವಣಗೆರೆ:ಹೊನ್ನಾಳಿ ತಾಲೂಕಿನ ಸಾಸ್ವೆಹಳ್ಳಿ ಗ್ರಾಮದ ಎಡಿವಿಎಸ್ ಸಮೂಹಸಂಸ್ಥೆಗಳ2024–25ನೇಸಾಲಿನವಾರ್ಷಿಕೋತ್ಸವಸಮಾರಂಭ ಫೆಬ್ರವರಿ 1ರಂದು ಶನಿವಾರ ಮಧ್ಯಾಹ್ನ 3ಕ್ಕೆ ಸಾಸ್ವೆಹಳ್ಳಿಯ ಎಡಿವಿಎಸ್ ಆವರಣದಲ್ಲಿ ನಡೆಯಲಿದೆ. ಸಂಸ್ಥೆಯ ಸಂಸ್ಥಾಪಕ ಕಾರ್ಯದರ್ಶಿ ಶಾಂತ ಕೃಷ್ಣಮೂರ್ತಿ ಅಧ್ಯಕ್ಷತೆ ವಹಿಸಲಿದ್ದು, ಸಂಸ್ಥಾಪಕ ಅಧ್ಯಕ್ಷ ಡಾ.ಎಸ್. ಹೆಚ್ ಕೃಷ್ಣಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಲಿದ್ದು, ಹೊನ್ನಾಳಿ ಶಾಸಕ ಡಿ.ಜಿ.ಶಾಂತನಗೌಡ ಕಾರ್ಯಕ್ರಮ ಉದ್ಘಾಟಿಸಿವರು. ಹಳೇ ವಿದ್ಯಾರ್ಥಿಗಳ ಸಂಘವನ್ನು ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್ ಉದ್ಘಾಟಿಸಿವರು.

## ಪ್ರಮುಖ ಸುದ್ದಿ

ಆಯುಷ್ ಇಲಾಖೆಯಿಂದ ಉಚಿತ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ ಆಯೋಜನೆ

# ಕೆಲಸದ ಜತೆಗೆ ಆರೋಗ್ಯದ ಕಡೆಗೂ ಗಮನಹರಿಸಿ

» ಚಿತ್ರದುರ್ಗ

ಆರೋಗ್ಯ ರಕ್ಷಣೆ ಎಲ್ಲರ ಆದ್ಯ ಕರ್ತವ್ಯವಾಗಿದ್ದು, ನಮ್ಮ ನಿತ್ಯ ಕೆಲಸಗಳ ಜೊತೆಗೆ ಆರೋಗ್ಯದ ಕಡೆ ಹೆಚ್ಚಿನ ಗಮನವನ್ನು ಹರಿಸಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರೋಣ ವಾಸುದೇವ ಹೇಳಿದರು.

ನಗದ ವಕೀಲರ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ನ್ಯಾಯಾಂಗ ಇಲಾಖೆ, ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ವಕೀಲರ ಸಂಘ ಸಹಯೋಗದಲ್ಲಿ ಆಯುಷ್ ಇಲಾಖೆ ವತಿಯಿಂದ ಉಚಿತ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರದಲ್ಲಿ ಅವರು ಮಾತನಾಡಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ ನಾಗಸಮುದ್ರ ಮಾತನಾಡಿ, ಆಯುಷ್ ಇಲಾಖೆ ವತಿಯಿಂದ ಇದು ಎರಡನೇ ಶಿಬಿರವಾಗಿದ್ದು, ಈ ಹಿಂದಿನ ಶಿಬಿರದಲ್ಲಿ ಸುಮಾರು 390 ಜನರು ಪ್ರಯೋಜನವನ್ನು ಪಡೆದಿದ್ದರು. ಈ ಶಿಬಿರವನ್ನು ಸಹ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನ ಪಡೆದು ಯಶಸ್ವಿಗೊಳಿಸಬೇಕೆಂದು ಕೋರಿದರು.




ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಇಂದಿನ ಒತ್ತಡದ ಬದುಕಿಗೆ ಹಾಗೂ ಜೀವನಶೈಲಿ ಜನ್ಯ ವ್ಯಾಧಿಗಳಿಗೆ ಆಯುಷ್ ಚಿಕಿತ್ಸಾ ಪದ್ಧತಿಯು ಉತ್ತಮ ವೈದ್ಯ ಪದ್ಧತಿಯಾಗಿದ್ದು. ನಾವೆಲ್ಲರೂ ಆಯುಷ್ ಸಿದ್ಧಾಂತಗಳನ್ನು ಅಳವಡಿಸಿಕೊಳ್ಳಬೇಕಿದೆ ಎಂದು ತಿಳಿಸಿದರು. ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಗಂಗಾಧರ್ ನಿರೂಪಿಸಿದರು. ಆಯುಷ್ ವೈದ್ಯಾಧಿಕಾರಿ ಡಾ. ಶಿವಕುಮಾರ್ ಪ್ರಾಸ್ತಾವಿಕ ನುಡಿಯಲ್ಲಿ ಈ ಶಿಬಿರದಲ್ಲಿ ದೊರೆಯುವ ಸೇವೆಗಳನ್ನು ವಿವರಿಸಿದರು. ಡಾ. ನಾರದಮುನಿ ಅವರು ಅತಿಥಿಗಳಿಗೆ ಔಷಧೀಯ ಸಸ್ಯಗಳನ್ನು ನೀಡಿ ಸ್ವಾಗತಿಸಿದರು. ಡಾ. ನಾಗರಾಜ್ ನಾಯ್ಕ್ ಅವರು ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಆಯುಷ್ ವೈದ್ಯಾಧಿಕಾರಿಗಳು, ಜಿಲ್ಲಾ ಆಯುಷ್ ಘಟಕದವೈದ್ಯರುಹಾಗೂಸಿಬ್ಬಂದಿಯವರು, ಆರೋಗ್ಯ ಹಾಗು ಕುಟುಂಬ ಕಲ್ಯಾಣ ಇಲಾಖೆಯ ಸಮುದಾಯ ಸಮುದಾಯ ಆರೋಗ್ಯಾಧಿಕಾರಿಗಳು ಇತರ ಸಿಬ್ಬಂದಿ ಹಾಜರಿದ್ದರು.

# ಫೆ.7, 8 ರಂದು ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆ

## ಕಾರ್ಯಕ್ರಮ ಯಶಸ್ವಿಗೆ ಉಪ ಸಮಿತಿಗಳ ರಚನೆ –ವಸತಿ ಹಾಗೂ ಊಟದ ವ್ಯವಸ್ಥೆಗೆ ಪ್ರಾಮುಖ್ಯತೆ ನೀಡಿ:ಡಿಸಿ

» **ಚಿತ್ರದುರ್ಗ**



ಫೆ.7 ಹಾಗೂ 8 ರಂದು ಚಿತ್ರದುರ್ಗ ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದ ಅನುಭವ ಮಂಟಪದಲ್ಲಿ 2024–25ನೇ ಸಾಲಿನ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಗಳ ಕಾರ್ಯಕ್ರಮ ಆಯೋಜಿಸಲು ಉದ್ದೇಶಿಸಲಾಗಿದೆ. ಕಾರ್ಯಕ್ರಮ ಯಶಸ್ವಿಗೆ ಉಪ ಸಮಿತಿಗಳನ್ನು ರಚನೆ ಮಾಡಲಾಗಿದ್ದು, ಹೊರ ಜಿಲ್ಲೆಗಳಿಂದ ಆಗಮಿಸುವ ಮಕ್ಕಳು ಶಿಕ್ಷಕರ ವಸತಿ ಹಾಗೂ ಊಟದ ವ್ಯವಸ್ಥೆಗೆ ಪ್ರಾಮುಖ್ಯತೆ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಕುರಿತು ಶುಕ್ರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 2007 ರಲ್ಲಿ ಚಿತ್ರದುರ್ಗ ಜಿಲ್ಲೆಯ ಅತಿಥೇಯದಲ್ಲಿ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಗಳ ಜರುಗಿದ್ದವು. ಪುನಃ ಅತಿಥೇಯ ವಹಿಸುವ ಜವಬ್ದಾರಿ ಜಿಲ್ಲೆಗೆ ಲಭಿಸಿದ್ದು, ಎರಡು ದಿನಗಳ ಕಾಲ 35 ಶೈಕ್ಷಣಿಕ ಜಿಲ್ಲೆಗಳಿಂದ 1378 ವಿದ್ಯಾರ್ಥಿಗಳು ಹಾಗೂ 105ಕ್ಕೂ ಹೆಚ್ಚು ನೋಡಲ್ ಅಧಿಕಾರಿಗಳು ಮತ್ತು ಮಾರ್ಗದರ್ಶಿ ಶಿಕ್ಷಕರುಭಾಗವಹಿಸಲಿದ್ದಾರೆ. ಕಾರ್ಯಕ್ರಮ ಸ್ಮರಣೀಯವಾಗಿಸುವಂತೆ ಶಿಕ್ಷಣ ಇಲಾಖೆ ಸಿದ್ಧತೆಗಳನ್ನು ಆರಂಭಿಸಬೇಕು. ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ಅತಿಥಿಗಳ ಆಹ್ವಾನ ಮತ್ತು ಶಿಷ್ಟಾಚಾರದ ಪಾಲನೆ ಸಮಿತಿ ರಚಿಸಬೇಕು. ನಗರಕ್ಕೆ ಆಗಮಿಸುವ ವಿದ್ಯಾರ್ಥಿಗಳ ಮಾರ್ಗದರ್ಶನಕ್ಕಾಗಿ ಕೆ.ಎಸ್.ಆರ್.ಟಿ. ಬಸ್ ನಿಲ್ದಾಣದಲ್ಲಿ ಮಾಹಿತಿ ಕೇಂದ್ರ ತೆರಯಬೇಕು. 5 ಜಿಲ್ಲೆಗಳಿಗೆ ಒಬ್ಬ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇಮಕ ಮಾಡಿ ನಗರಕ್ಕೆ ಆಗಮಿಸುವ ವಿದ್ಯಾರ್ಥಿಗಳನ್ನು ಬರಮಾಡಿಕೊಂಡು ಬಾಲಕ ಹಾಗೂ ಬಾಲಕಿಯರಿಗೆ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸಬೇಕು. ನೊಂದಣಿ ಮಾಡಿಕೊಳ್ಳಲು ಅನುಕೂಲವಾಗುವಂತೆ ಪ್ರತಿ 2 ಜಿಲ್ಲೆಗಳಿಗೆ ಒಂದು ನೊಂದಣಿಗೆ ಕೌಂಟರ್ ತೆರೆಯಬೇಕು. ವಿದ್ಯಾರ್ಥಿಗಳನ್ನು ಕರೆ ತರಲು ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ತಿಳಿಸಿದರು.

**ಆರೋಗ್ಯ ಕೇಂದ್ರ ಸ್ಥಾಪನೆ:** ಪ್ರತಿಭಾ ಕಾರಂಜಿ ನಡೆಯುವ ಸ್ಥಳದಲ್ಲಿ ತಾತ್ಕಾಲಿಕವಾಗಿ ಆರೋಗ್ಯ ಕೇಂದ್ರ ಸ್ಥಾಪನೆ ಮಾಡಬೇಕು. ಇಬ್ಬರು ವೈದ್ಯರು ಸೇರಿದಂತೆ ಅಗತ್ಯ ವೈದ್ಯಕೀಯ ಸಿಬ್ಬಂದಿ, ಔಷಧೋಪಚಾರಗಳು ಸ್ಥಳದಲ್ಲಿ ಲಭ್ಯವಿರಬೇಕು. ತರ್ತು ಸೇವೆಗಾಗಿ ಆಂಬ್ಯುಲೆನ್ಸ್ ಇರಿಸುವಂತೆ ಜಿಲ್ಲಾಧಿಕಾರಿ ಸೂಚಿಸಿದರು.ಮಕ್ಕಳಿಗೆ ಕುಡಿಯಲು ಶುದ್ಧ ಕುಡಿಯುವ ನೀರು ನೀಡಬೇಕು. ಆಹಾರವನ್ನು ಪರೀಕ್ಷೆಗೆ ಒಳಪಡಿಸಿದ ನಂತರವೇ ಮಕ್ಕಳಿಗೆ ವಿತರಿಸಬೇಕು. ಸ್ಪರ್ಧೆಗಳು ಜರುಗುವ ಸ್ಥಳ, ಸಂಪರ್ಕಿಸಬೇಕಾದ ನೋಡಲ್ ಅಧಿಕಾರಿಗಳ ವಿವರಗಳನ್ನು ಮಕ್ಕಳಿಗೆ ಗೋಚರವಾಗುವಂತೆ ಮುದ್ರಿಸಿ ಪ್ರಮುಖ ಸ್ಥಳಗಳಲ್ಲಿ ಲಗತ್ತಿಸಬೇಕು. ಶಿಕ್ಷಣ ಇಲಾಖೆ ಜೊತೆಗೆ ಸಮಾಜ ಕಲ್ಯಾಣ, ಹಿಂದುಳಿದ ವರ್ಗ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳನ್ನು ವಸತಿ ಸಮಿತಿ ಮೇಲುಸ್ತುವಾರಿಗೆ ನೇಮಿಸಬೇಕು. ಪ್ರಾದೇಶಿಕ ಸಾರಿಗೆ ಅಧಿಕಾರಿ ಅಥವಾ ಕೆ.ಎಸ್.ಆರ್.ಟಿ ಅಧಿಕಾರಿಗಳ ನೇತೃತ್ವದಲ್ಲಿ ಸಾರಿಗೆ ಸಮಿತಿ ರಚಿಸಬೇಕು. ಪ್ರತಿ ಸ್ಪರ್ಧೆಗಳಿಗೂ ಅನುಭವಿಗಳನ್ನು ತೀರ್ಪುಗಾರರನ್ನಾಗಿ ನೇಮಿಸಬೇಕು. ನಿಷ್ಪಕ್ಷಪಾತವಾಗಿ ತೀರ್ಪುಗಳನ್ನು ನೀಡಬೇಕು. ಯಾವುದೇ ಗೊಂದಲಕ್ಕೆ ಆಸ್ಪದ ನೀಡಬಾರದು. ಬಂದೋಬಸ್ತ್‌ಗೆ ಅಗತ್ಯ ಇರುವ ಮಹಿಳಾ ಹಾಗೂ ಪುರುಷ ಪೊಲೀಸರನ್ನು ನಿಯೋಜಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

**ಐತಿಹಾಸಿಕ ಸ್ಥಳಗಳಿಗೆ ಮಕ್ಕಳ ಪ್ರವಾಸ:** ಬೇರೆ ಜಿಲ್ಲೆಗಳಿಂದ ಆಗಮಿಸುವ ವಿದ್ಯಾರ್ಥಿಗಳಿಗೆ ಜಿಲ್ಲೆಯ ಐತಿಹಾಸಿಕ ಮಹತ್ವನ್ನು ತಿಳಿಸಿಕೊಡಬೇಕು. ಇದಕ್ಕಾಗಿ ಬ್ರೋಚರ್, ಬ್ಯಾನರ್‌ಗಳನ್ನು ಸ್ಪರ್ಧೆಗಳು ನಡೆಯುವ ಸ್ಥಳದಲ್ಲಿ ಅಳವಡಿಸಬೇಕು. ಇದಕ್ಕಾಗಿ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳ ನೇತೃತ್ವದಲ್ಲಿ ಸಮಿತಿ ರಚಿಸಬೇಕು. ಆಯ್ದ ವಿದ್ಯಾರ್ಥಿಗಳಿಗೆ ಜಿಲ್ಲೆಯ ಐತಿಹಾಸಿ ಸ್ಥಳಗಳಿಗೆ ಪ್ರವಾಸ ಏರ್ಪಡಿಸಬೇಕು. ರಾಜ್ಯ ಮಟ್ಟದ ಪ್ರತಿಭಾ ಕಾರಂಜಿಗೆ ಆಗಮಿಸವ ವಿದ್ಯಾರ್ಥಿ ಹಾಗೂ ಶಿಕ್ಷಕರು ಜಿಲ್ಲೆಯಿಂದ ಸವಿ ನೆನಪುಗಳೊಂದಿಗೆ ಮರಳುವಂತೆ ಕಾರ್ಯಕ್ರಮ ಆಯೋಜಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ಸಭೆಯಲ್ಲಿ ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಎಂ.ಆರ್.ಮಂಜುನಾಥ್, ಪಿಯು ಉಪನಿರ್ದೇಶಕ ಪುಟ್ಟಸ್ವಾಮಿ, ಡಿ.ಹೆಚ್.ಓ ಡಾ.ರೇಣುಪ್ರಸಾದ್ ಸೇರಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ಸೈಬರ್ ಅಪರಾಧದ ಬಗ್ಗೆ ಮುಖಾ ಮುಖಿ

» **ಚಿತ್ರದುರ್ಗ**



ಇದೇ ಮೊಟ್ಟಮೊದಲ ಬಾರಿಗೆ ಚಿತ್ರದುರ್ಗದ ವಾಸವಿ ಯುವಜನ ಸಂಘದವತಿಯಿಂದ ಸೈಬರ್ ಅಪರಾಧದ ಬಗ್ಗೆ ಪೊಲೀಸ್ ಅಧಿಕಾರಿಗಳೊಂದಿಗೆ ಮುಖಾ ಮುಖಿ ಕಾರ್ಯಕ್ರಮವನ್ನು ಫೆ. 12ರ ಶನಿವಾರ ಸಂಜೆ 5 ಗಂಟೆಗೆ ನಗರದ ವಾಸವಿ ಮಹಲ್‌ನಲ್ಲಿ ಆಯೋಜಿಸಲಾಗಿದೆ ಎಂದು ವಾಸವಿ ಯುವಜನ ಸಂಘದ ಅಧ್ಯಕ್ಷರಾದ ಧನರಾಜ್ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅರ್ಯವೈಶ್ಯ ಸಂಘ ಹಾಗೂ ವಾಸವಿ ಯುವಜನ ಸಂಘ(ರಿ), ಚಿತ್ರದುರ್ಗ ಇವರ ಆಶ್ರಯದಲ್ಲಿ ಚಿತ್ರದುರ್ಗ ಜಿಲ್ಲಾ ಪೊಲೀಸ್, ಇವರ ಸಹಕಾರದೊಂದಿಗೆ ಇತ್ತೀಚಿನ ದಿನಗಳಲ್ಲಿ ಪ್ರಪಂಚದಾದ್ಯಂತ ಕಾಡುತ್ತಿರುವ ಸೈಬರ್ ವಂಚನೆಗಳನ್ನು ತಡೆಗಟ್ಟಲು ನಮ್ಮ ಒಂದು ಸಣ್ಣ ಪ್ರಯತ್ನ ಇದಾಗಿದೆ. ಸೈಬರ್ ವಂಚನೆಯನ್ನು ತಡೆಯಲು ಸಂಘದ ವತಿಯಿಂದ "ಮುಖಾ ಮುಖಿ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ಸೈಬರ್ ಕ್ರೈಂ ವಿಭಾಗದ ಪೊಲೀಸ್ ನಿರೀಕ್ಷಕರಾದ ಎನ್. ವೆಂಕಟೇಶ್‌ರವರು ಸಾರ್ವಜನಿಕ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಲಿದ್ದಾರೆ ಸಂಜೆ 5 ಗಂಟೆಯಿಂದ 8.30ರವರೆಗೆ ನಡೆಯಲಿದೆ.

ವಾಸವಿ ಯುವಜನ ಸಂಘದ ಮಾಜಿ ಅಧ್ಯಕ್ಷರಾದ ಕಾರ್ತಿಕ ಮಾತನಾಡಿ, ಚಿತ್ರದುರ್ಗ ಇದೇ ಮೊಟ್ಟಮೊದಲ ಬಾರಿಗೆ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ನೇರವಾಗಿ ಪೊಲೀಸ್ ಇಲಾಖೆಯ ವರೊಂದಿಗೆ ಪ್ರಶ್ನೆ ಕೇಳುವ ಸದಾವಕಾಶ. ಈ ಕಾರ್ಯಕ್ರಮದಲ್ಲಿ ಮುಂದಾಗುವ ಸೈಬರ್ ಅಪರಾಧಗಳನ್ನು ಹೇಗೆ ತಡೆಗಟ್ಟಬಹುದು ಎನ್ನುವ ಪ್ರಶ್ನೆಗೆ ನೇರವಾಗಿ ಪೊಲೀಸ್ ಇಲಾಖೆಯವರಿಂದ ಸಲಹೆಗಳನ್ನು ಪಡೆಯಬಹುದು. ಹೂಡಿಕೆ ವಂಚನೆ, ವಿದ್ಯುಸ್ಥಾನ ದಸ್ತಗಿರಿ, ವಂಚಕ ಲೋನ್ ಆಪ್‌ಗಳು, ಉದ್ಯೋಗದ ಹೆಸರಿನಲ್ಲಿ ವಂಚನೆ, ಪ್ರತೀಕಾರದ ಅಶ್ಲೀಲತೆ, ಹೇಸರಗತ್ತೆ ಖಾತೆ. ಸಾಮಾಜಿಕ ಜಾಲತಾಣಗಳಲ್ಲಿ ವ್ಯವಹರಿಸುವಾಗ ಜಾಗ್ರತೆ ವಹಿಸುವುದು, ಸುರಕ್ಷಿತ ಅಂತರ್ಜಾಲ ಬಳಕೆ ಹಾಗೂ ಇತರೆ ಸೈಬರ್ ಅಪರಾಧಕ್ಕೆ ಸಂಬಂಧ ಪಟ್ಟ ಅಪರಾಧಗಳ ಬಗ್ಗೆ ಹಾಗೂ ಡಿಜಿಟಲ್ ಬಂಧನ, ಸಾಲದ ಅಪ್ಲಿಕೇಶನ್ ವಂಚನೆ, ಆನ್‌ಲೈನ್ ಅಶ್ಲೀಲತೆ, ಸಾಮಾಜಿಕ ಮಾಧ್ಯಮದಲ್ಲಿ ಹೇಗೆ ವರ್ತಿಸಬೇಕು, ಸುರಕ್ಷಿತ ಬ್ರೌಸಿಂಗ್ ಮತ್ತು ಇತರ ಸೈಬರ್ ಅಪರಾಧ ಸಂಬಂಧಿತ ವಿಷಯಗಳು ಬಗ್ಗೆಯೂ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದರು.

ಪ್ರಶ್ನೆಗಳನ್ನು ಕೇಳಬಯಸುವವರು, ಒಂದು ಗಂಟೆ ಮುಂಚಿತವಾಗಿಯೇ ಪ್ರಶ್ನೆಗಳನ್ನು ನೀಡಿರಬೇಕು. ಪ್ರಶ್ನೆಯೊಂದಿಗೆ ಹೆಸರು, ವಿಳಾಸ ಮತ್ತು ಮೊಬೈಲ್ ಸಂಖ್ಯೆಯನ್ನು ನೀಡಿರಬೇಕು. ಹೆಚ್ಚಿನ ವಿವರಗಳಿಗೆ ಪಿ.ವಿ. ಧನರಾಜ್ 16, : 8217265395 ವಿನಯ್ ರಾಜ್ ಟೀಕಾ : 9986941189ರನ್ನು ಸಂಪರ್ಕಿಸಬಹುದಾಗಿದೆ.

# ಫೆ.7ಕ್ಕೆ ಅನ್ಲಾಕ್ ರಾಘವ ಬಿಡುಗಡೆ




» **ಚಿತ್ರದುರ್ಗ**

ಚಿತ್ರದ ನಾಯಕನಿಗೆ ಯಾವುದೇ ರೀತಿಯ ಬೀಗಗಳನ್ನು ಕೈಗೆ ಸಿಗುವ ವಸ್ತುಗಳನ್ನು ಬಳಸಿ ಸಲೀಸಾಗಿ ಅನ್‌ಲಾಕ್ ಮಾಡುವ ಟ್ಯಾಲೆಂಟ್ ಇರುತ್ತದೆ. ಆದರೆ, ಲೈಫ್ ಎಂಬ ಜರ್ನಿಯಲ್ಲಿ ಅವನು ಲಾಕ್ ಆದಾಗ, ಹೇಗೆ ಅದನ್ನು ಅನ್‌ಲಾಕ್ ಮಾಡಿಕೊಂಡು ಹೊರಬರುತ್ತಾನೆ ಎನ್ನುವುದೇ ಚಿತ್ರದ ಒನ್ ಲೈನ್ ಸ್ಟೋರಿಯಾಗಿದೆ ಎಂದು ಐಪ್ಲೆಕ್ಸ್‌ನ ಅವಿನಾಶ ತಿಳಿಸಿದ್ದಾರೆ.

ಚಿತ್ರದುರ್ಗ ಪತ್ರಕರ್ತರ ಭವನದಲ್ಲಿ ಸುದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆಬ್ರವರಿ 7 ಕ್ಕೆ ಅನ್ಲಾಕ್ ರಾಘವ' ಚಿತ್ರ ರಾಜ್ಯದಾದ್ಯಂತ ಬಿಡುಗಡೆಯಾಗುತ್ತಿದೆ. ಚಿತ್ರಕ್ಕೆ ರಾಮಾ ರಾಮಾ ರೇ ಖ್ಯಾತಿಯ ಡಿ.ಸತ್ಯಪ್ರಕಾಶ್ ಕಥೆ, ಚಿತ್ರಕತೆ ಬರೆದಿದ್ದಾರೆ. ರಾಜು ಜೇಮ್ಸ್ ಬಾಂಡ್ ಫೇಮ್‌ನ ದೀಪಕ್ ಮಧುವನಹಳ್ಳಿ ನಿರ್ದೇಶನ ಮಾಡಿದ್ದಾರೆ. ಮಯೂರ ಮೋಷನ್ ಪಿಕ್ಚರ್ಸ್ ಮತ್ತು ಐಪ್ಲೆಕ್ಸ್ ಸಹಯೋಗದಲ್ಲಿ ನಿರ್ಮಾಣ ಆಗಿರೋ ಈ ಸಿನಿಮಾದಲ್ಲಿ ಪ್ರಾಮಿಸಿಂಗ್ ಹೀರೋ ನಮ್ಮ ಮಿಲಿಂದ್ ಗೌತಮ್ ಮತ್ತು ಲವ್ ಮಾಕ್ಟೇಲ್ 2 ಖ್ಯಾತಿಯ ಬೆಡಗಿ ರೇಚಲ್ ಡೇವಿಡ್ ಜೊತೆಯಾಗಿ ಅಭಿನಯಿಸಿದ್ದಾರೆ.

**ಪ್ರಮುಖ ಸುದ್ದಿ**

# 12ನೆ ಶತಮಾನದಲ್ಲಿಯೇ ಶರಣರು ಕಾಯಕಕ್ಕೆ ಒತ್ತು ಕೊಟ್ಟಿದ್ದರು

» **ಚಿತ್ರದುರ್ಗ**



ಹನ್ನೆರಡನೆ ಶತಮಾನದಲ್ಲಿಯೇ ಬಸವಾದಿ ಶರಣರು ಕಾಯಕಕ್ಕೆ ಒತ್ತು ಕೊಟ್ಟಿದ್ದರು. ನೀಡುವವರಿದ್ದರು. ಬೇಡುವವರಿರಲಿಲ್ಲ. ಏಕೆಂದರೆ ಎಲ್ಲರೂ ಕಾಯಕ ಮಾಡಿ ಬದುಕುತ್ತಿದ್ದರು. ಹೋರಾಟ, ಚಳುವಳಿಯ ಜೊತೆ ರೈತರು ಕೃಷಿ ಕಾಯಕದಲ್ಲಿ ತೊಡಗಿದಾಗ ಪ್ರಶಸ್ತಿಗಳು ಹುಡುಕಿಕೊಂಡು ಬರುತ್ತವೆಂದು ಚಿತ್ತರಗಿ ಸಂಸ್ಥಾನ ಶಾಖಾ ಮಠ ಸಿದ್ದಯ್ಯನಕೋಟೆಯ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ಕೂಡಲ ಸಂಗಮ ಸುಕ್ಷೇತ್ರದ ಬಸವಪೀಠ 38 ನೇ ಶರಣ ಮೇಳ ಉತ್ಸವದಲ್ಲಿ ಒಕ್ಕಲಿಗ ಮುದ್ದಣ್ಣನವರ ನೆನಪಿನ ಪ್ರಮುಖ ಪ್ರಜೆ ರಾಷ್ಟ್ರೀಯ ಪ್ರಶಸ್ತಿ ಪಡೆದಿರುವ ರೈತ ಮುಖಂಡ ಹಿರಿಯ ಹೋರಾಟಗಾರ ಬೇಡರೆಡ್ಡಿಹಳ್ಳಿ ಬಸವರೆಡ್ಡಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ಒಕ್ಕೂಟ, ಪ್ರಗತಿಪರ ಸಂಘಟನೆಗಳ ವತಿಯಿಂದ ಎ.ಪಿ.ಎಂ.ಸಿ. ರೈತ ಭವನದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ರೈತಹೋರಾಟಗಾರರಲ್ಲಿಛಲವಿರಬೇಕು. ಪವಾಡ ಪುರುಷ ನಾಯಕನಹಟ್ಟಿಯ ಗುರುತಿಪ್ಪೇರುದ್ರಸ್ವಾಮಿ ಮಾಡಿದವರಿಗೆ ನೀಡು ಭಿಕ್ಷೆ ಎನ್ನುವ ಧೋರಣೆ ಮೇಲೆ ಕೆರೆ ಕಟ್ಟಿಸಿದ್ದಾರೆ. ಕ್ರಾಂತಿಕಾರಿ ಬಸವಣ್ಣ ಕಾಯಕವೆ ಕೈಲಾಸ ಎನ್ನುವ ಸಂದೇಶವನ್ನು ವಿಶ್ವಕ್ಕೆ ಸಾರಿದ್ದಾರೆ. ಸಂಘಟನೆಯಿಂದ ಮಾತ್ರ ಆಳುವ ಸರ್ಕಾರಗಳನ್ನು ಮಣಿಸಲು ಸಾಧ್ಯ. ಬಸವಣ್ಣನವರು ಜಾತಿ ನಿರ್ಮೂಲನೆ ಮಾಡಿದರೆ. ಇಂದಿನ ಸಮಾಜದಲ್ಲಿ ಜಾತಿಯತೆ ತಾಂಡವವಾಡುತ್ತಿದೆ. ಬಸವಾದಿ ಶರಣರ ವಚನ ಸಾಹಿತ್ಯಗಳನ್ನು ಎಲ್ಲರೂ ಓದಲೇಬೇಕೆಂದರು.

ಸಾಮಾಜಿಕ ಚಿಂತಕ ಜೆ.ಯಾದವರೆಡ್ಡಿ ಮಾತನಾಡಿ ದೇಶಕ್ಕೆ ಅನ್ನ ನೀಡುವ ರೈತ ಅಸಂಘಟಿತ, ಅಸಹಾಯಕನಾಗಿದ್ದಾನೆ. ಕಾರ್ಮಿಕ ಸಂಘಟನೆಗಳಿಗೆ ಗುರಿ, ಸ್ಪಷ್ಟತೆಯಿದೆ. ಕೇಂದ್ರ ಸರ್ಕಾರದ ರೈತ ವಿರೋಧಿ ಕಾಯಿದೆಯನ್ನು ವಿರೋಧಿಸಿ ರೈತರು ಒಂದು ವರ್ಷಗಳಿಗೂ ಹೆಚ್ಚು ಕಾಲ ದೆಹಲಿಯಲ್ಲಿ ಚಳುವಳಿ ನಡೆಸಿದಾಗ 720 ರೈತರು ಪ್ರಾಣ ತೆತ್ತರು. ನಿಮ್ಮ ಬುಡಕ್ಕೆ ನೀರು ಬಂದಾಗಲು ರೈತರು ಸುಮ್ಮನಿರುತ್ತಾರೆಂದರೆ ಚಳುವಳಿಗೆ ಅರ್ಥವಿಲ್ಲದಂತಾಗುತ್ತದೆ. ದೌರ್ಜನ್ಯ, ದಬ್ಬಾಳಿಕೆಗಳು ನಡೆದಾಗಲಾದರೂ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಸಂಘಟಿತರಾಗಿ ಹೋರಾಡಿ ಎಂದು ಕರೆ ನೀಡಿದರು.

ಮಧ್ಯಕರ್ನಾಟಕದ ಬಯಲುಸೀಮೆ ಚಿತ್ರದುರ್ಗಕ್ಕೆ ಭದ್ರಾಮೇಲ್ದಂಡೆಗಾಗಿ ಅನೇಕ ವರ್ಷಗಳಿಂದಲೂ ಹೋರಾಟ ನಿರಂತರವಾಗಿದೆ. ಜಿಲ್ಲೆಯ ರೈತರು ಒಗ್ಗಟ್ಟಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಶಕ್ತಿ ತೋರಿಸದಿದ್ದರೆ ಯಾವ ಯೋಜನೆಗಳು ಜಾರಿಯಾಗುವುದಿಲ್ಲ ಎಂದು ಎಚ್ಚರಿಸಿದರು.

ಪತ್ರಕರ್ತರ ದೊಣ್ಣೆಹಳ್ಳಿ ಗುರುಮೂರ್ತಿ ಮಾತನಾಡುತ್ತ ಎಲ್ಲಾ ಕಡೆ ರೈತರ ಮೇಲೆ ಹಲ್ಲೆ, ದೌರ್ಜನ್ಯಗಳು ನಡೆಯುತ್ತಿವೆ. ಸರ್ಕಾರಿ ಆಸ್ಪತ್ರೆ ಭ್ರಷ್ಠಾಚಾರದ ಕೂಪವಾಗಿದೆ. ರೈತ ಬೆಳೆದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಸಿಗುತ್ತಿಲ್ಲ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ರೈತ ನಾಯಕ ನಂಜುಂಡಸ್ವಾಮಿ, ಬಸವಣ್ಣನವರ ಆದರ್ಶಗಳನ್ನು ರೈತರು ಧರಿಸಬೇಕು. ತತ್ವಬದ್ದತೆಯ ಅಧ್ಯಯನಶೀಲ ಶಿಬಿರಗಳು ಎಲ್ಲಿಯವರೆಗೂ ನಡೆಯುವುದಿಲ್ಲವೋ ಅಲ್ಲಿತನಕ ನಕಲಿ ತತ್ವ ಜೀವಂತವಾಗಿರುತ್ತದೆಂದು ಹೇಳಿದರು.

ಸರ್ಕಾರಿ ಕಚೇರಿ, ಪೊಲೀಸ್ ಠಾಣೆಗಳಲ್ಲಿ ನಡೆಯುವ ಅನ್ಯಾಯದ ವಿರುದ್ದ ರೈತರು ಹೋರಾಟಕ್ಕಿಳಿಯಬೇಕು. ಕೋಮುವಾದಿಗಳಿಂದ ಅಪಾಯ ಖಂಡಿತ. ಸಂಘಟನೆ, ಹೋರಾಟಗಳ ಜೊತೆಗೆ ತತ್ವಬದ್ದರಾಗಿರದಿದ್ದರೆ ಅವಕಾಶವಾದಿಗಳಾಗುತ್ತೀರ ಎಂದು ಜಾಗೃತಿಗೊಳಿಸಿದರು.

ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ಹಿರಿಯರು ಹೋರಾಡಿ ಪ್ರಾಣ ತ್ಯಾಗ ಮಾಡಿದ್ದಾರೆ. ಅದೇ ರೀತಿ ರೈತರು ತಾವು ಬೆಳೆದ ಬೆಳೆಗಳಿಗೆ ಬೆಂಬಲ ಬೆಲೆ ಸಿಗಬೇಕಾದರೆ ನಿರಂತರ ಹೋರಾಟವಿರಬೇಕು. ನೀರು, ವಿದ್ಯುತ್ ರೈತರಿಗೆ ಕಾಡುತ್ತಿರುವ ಸಮಸ್ಯೆ. ನಕಲಿ ಶಾಲುಗಳನ್ನು ಹೆಗಲ ಮೇಲೆ ಹಾಕುವವರ ಹಾವಳಿ ಜಾಸ್ತಿಯಾಗಿದೆ. ಬದುಕಿಗಾಗಿ ಹೋರಾಟ, ಹೋರಾಟಕ್ಕಾಗಿ ಬದುಕು ಎನ್ನುವ ಸಿದ್ದಾಂತದ ಮೇಲೆ ರೈತರು ನಿಲ್ಲಬೇಕಾಗುತ್ತದೆಂದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ರೈತ ನಾಯಕ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಆಳುವ ಸರ್ಕಾರಗಳ ಅನ್ಯಾಯ, ಅಕ್ರಮ, ದೌರ್ಜನ್ಯದ ನಡುವೆಯೇ ರೈತನಾಗಿ ಸ್ವಾಭಿಮಾನದಿಂದ ಬದುಕುತ್ತಿದ್ದೇನೆ. ಸರ್ಕಾರದಿಂದ ಯಾವ ನೆರವನ್ನು ತೆಗೆದುಕೊಂಡಿಲ್ಲ. ಹಸಿರುಶಾಲಿನ ದುರುಪಯೋಗವಾಗಬಾರದು. ಛಿದ್ರಗೊಂಡಿರುವ ರೈತ ಸಂಘಟನೆಗಳೆಲ್ಲಾ ಒಂದಾಗಿ ಐತಿಹಾಸಿಕ ಹೋರಾಟಕ್ಕೆ ಮುಂದಾಗಬೇಕೆಂಬುದು ನನ್ನ ಆಸೆ ಎಂದು ಹೇಳಿದರು.

ರೈತ ನಾಯಕ ನಂಜುಂಡಸ್ವಾಮಿರವರಲ್ಲಿ ಅಘಾದವಾದ ಶಕ್ತಿಯಿತ್ತು. ಅವರ ಚಿಂತನೆ, ವಿಚಾರಧಾರೆಗಳನ್ನು ಅಳವಡಿಸಿಕೊಂಡು ರೈತರು ಹೋರಾಟದಲ್ಲಿ ನಿರತರಾಗಬೇಕು. ಚಿಕ್ಕಂದಿನಿಂದಲೂ ನಾನು ಕೃಷಿಯಲ್ಲಿ ತೊಡಗಿದ್ದರಿಂದ ಪ್ರಮುಖ ಪ್ರಜೆ ರಾಷ್ಟ್ರೀಯ ಪ್ರಶಸ್ತಿ ಸಿಕ್ಕಿರುವುದು ಇಡಿ ರೈತ ಕುಲಕ್ಕೆ ಸಂದ ಗೌರವ ಎಂದು ಸಂತಸ ಹಂಚಿಕೊಂಡರು.

ರಾಷ್ಟ್ರೀಯ ಬಸವದಳ ಬೆಂಗಳೂರಿನ ವೀರೇಶ್ ಮಾತನಾಡುತ್ತ ಸಮಾಜಕ್ಕಾಗಿ ಬದುಕಿರುವ ರೈತರ ಹೋರಾಟ ಪ್ರಖರ, ಪ್ರಬುದ್ದವಾಗಿ ಬೆಳೆಯಬೇಕು. ರೈತ ಮುಖಂಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿಗೆ ಸಿಕ್ಕಿರುವ ಪ್ರಶಸ್ತಿ ವಿಶಿಷ್ಟವಾದುದು. ಹೋರಾಟದ ಜೊತೆ ರೈತರು ಸೇವಾ ಮನೋಭಾವ ಮೈಗೂಡಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ದಿನೇಶ್‌ಗೌಡಗೆರೆ, ರೈತ ಮುಖಂಡ ಆರ್.ಬಿ.ನಿಜಲಿಂಗಪ್ಪ, ಕರ್ನಾಟಕಶಾಂತಿಮತ್ತುಸೌಹಾರ್ಧವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್, ಚಿಕ್ಕಬ್ಬಿಗೆರೆ ನಾಗರಾಜ್ ಇವರುಗಳು ಮಾತನಾಡಿದರು.

ಜಿಲ್ಲೆಯ ಆರು ತಾಲ್ಲೂಕಿನ ರೈತ ಮುಖಂಡರುಗಳು ಅಭಿನಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

**ಫಾಸ್ಟ್ ನ್ಯೂಸ್**

## ಉಮಾಮಹೇಶ್ವರ ಟ್ರಸ್ಟ್‌ಗೆ ಪದಾಧಿಕಾರಿಗಳ ನೇಮಕ




» **ದಾವಣಗೆರೆ**

ಗ್ರಾಮದಸರ್ವಾಂಗೀಣಅಭಿವೃದ್ಧಿ,ದೇವಸ್ಥಾನಗಳ ನಿರ್ವಹಣೆ, ಪ್ರತಿಭಾವಂತ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಾಯ ಹಸ್ತ ನೀಡುವುದು ಸೇರಿದಂತೆ ವಿವಿಧ ಸಾಮಾಜಿಕಉದ್ದೇಶದಿಂದತಾಲ್ಲೂಕಿನ ನಾಗನೂರುಗ್ರಾಮದಲ್ಲಿ ಶ್ರೀ ಉಮಾಮಹೇಶ್ವರ ಸೇವಾ ಟ್ರಸ್ಟ್ ಸ್ಥಾಪಿಸಿ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.ಟ್ರಸ್ಟ್ ನ ಗೌರವಾಧ್ಯಕ್ಷರಾಗಿಗ್ರಾಮದ ಹಿರಿಯರಾದ ಎಂ.ಜಿ.ಮಹೇಶ್ವರಪ್ಪ, ಹೆಚ್.ಬಸವರಾಜಪ್ಪ, ಆವರಗೆರೆ ಹನುಮಂತಪ್ಪ, ಎನ್. ಎಂ.ಮಹೇಶ್ವರ 'ಯ್ಯಅವರನ್ನುಆಯ್ಕೆ ಮಾಡಲಾಗಿದೆ.ಅಧ್ಯಕ್ಷರಾಗಿ ಎನ್.ಡಿ.ಮಲ್ಲಿಕಾರ್ಜುನ, ಉಪಾಧ್ಯಕ್ಷರುಗಳಾಗಿ ಎ ಅಂಜಿನಪ್ಪ, ಚನ್ನಾಚಾರಿ, ಟಿ .ಎನ್.ರಾಮಚಂದ್ರಪ್ಪ ,ಹೆಚ್ ನಿಂಗಪ್ಪ ನೇಮಕಗೊಂಡಿದ್ದಾರೆ. ಕಾರ್ಯದರ್ಶಿಗಳಾಗಿಎನ್.ಕೆ.ಅರುಣ್‌ಕುಮಾರ್, ಎನ್. ಜಿ .ಶಶಿಕುಮಾರ್,ಕನ್ವಿನರ್ ಆಗಿ ಕೆ.ಮಂಜುನಾಥ್,ಖಜಾಂಚಿಯಾಗಿ ಡಿ.ಎಸ್. ಜ್ಞಾನಮೂರ್ತಿ,ಡಿ.ನಾಗರಾಜ್ ಮತ್ತು ಸಹ ಟ್ರಸ್ಟಿಗಳಾಗಿ ಎನ್.ಡಿ.ನಾಗರಾಜಪ್ಪ, ಎಂ.ಎನ್. ಮಲ್ಲಿಕಾರ್ಜುನ, ಎನ್.ಎನ್.ಕಲ್ಲೇಶ್, ಎ.ರಾಜು,ಕೆ.ಶಿವಕುಮಾರ್,ಕಲ್ಲೇಶ್ ಪತ್ರೆ, ರೇವಣಸಿದ್ದಪ್ಪ ಬಣಕಾರ್,ಬಸವರಾಜ್ ಹೊಳೆಯಪ್ಪರ, ಎಸ್.ಎಚ್.ವಿಶ್ವನಾಥ್, ಕರಿಹಾಲಪ್ಪ ಮತ್ತುಜರಿಕಟ್ಟೆಚಂದ್ರಪ್ಪಅವರನ್ನು ನೇಮಕ ಮಾಡಲಾಗಿದೆ.

## ಮಾಯಕೊಂಡ ಕ್ಷೇತ್ರಕ್ಕೆ 750 ಮನೆ ಮಂಜೂರು

» **ದಾವಣಗೆರೆ**



ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ದಾವಣಗೆರೆ ತಾಲೂಕಿಗೆ 506, ಚನ್ನಗಿರಿ ತಾಲೂಕಿಗೆ 244 ಸೇರಿ ಕ್ಷೇತ್ರಕ್ಕೆ ಒಟ್ಟು 750 ಮನೆಗಳು ಮಂಜೂರಾಗಿವೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ತಿಳಿಸಿದ್ದಾರೆ.

ನಿರ್ಗತಿಕರು, ಬಡವರಿಗೆ ಸೂರು ಕಲ್ಪಿಸಲು ಸರ್ಕಾರ ಮತ್ತು ವಸತಿ ಸಚಿವರ ಮೇಲೆ ಒತ್ತಡ ಹಾಕಿ ಮನೆಗಳನ್ನು ಮಂಜೂರು ಮಾಡಿಸಲಾಗಿದೆ. ಕ್ಷೇತ್ರದ ವ್ಯಾಪ್ತಿಯ ದಾವಣಗೆರೆ ತಾಲೂಕಿನ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಿಗೆ 2022–23ನೇ ಸಾಲಿನ ಡಾ.ಬಿ.ಆರ್.ಅಂಬೇಡ್ಕರ್ ನಿವಾಸ್ ಮತ್ತು ಬಸವ ವಸತಿ ಯೋಜನೆಯಡಿ 506, ಚನ್ನಗಿರಿ ತಾಲೂಕಿನ ವ್ಯಾಪ್ತಿಗೆ ಬರುವ ಗ್ರಾಮ ಪಂಚಾಯಿತಿಗಳಿಗೆ 244 ಸೇರಿದಂತೆ ಒಟ್ಟು 750 ಮನೆಗಳನ್ನು ಮಂಜೂರು ಮಾಡಿಸಲಾಗಿದೆ.

ದಾವಣಗೆರೆತಾಲೂಕಿನಗ್ರಾಪಂಗಳಾದಆಲೂರು 12, ಆನಗೋಡು 31, ಅಣಜಿ 23, ಅಣಬೇರು 30, ಅತ್ತಿಗೆರೆ 18, ಬಾಡ 25, ಬಸವನಾಳು 24, ಗೋಪನಾಳು 21, ಹೆಮ್ಮನಬೇತೂರು 25, ಹೊನ್ನೂರು 20, ಹುಚ್ಚವ್ವನಹಳ್ಳಿ 23, ಐಗೂರು 5, ಕಂದಗಲ್ಲು 10, ಕಂದನಕೋವಿ 10, ಕೊಡಗನೂರು 19, ಕುರ್ಕಿ 20, ಮಳಲಕೆರೆ 20, ಮತ್ತಿ 15, ಮಾಯಕೊಂಡ 33, ನರಗನಹಳ್ಳಿ 22, ಶ್ಯಾಗಲೆ 21, ತೋಳಹುಣಿಸೆ 14, ನೇರ್ಲಿಗೆ 18, ಲೋಕಿಕೆರೆ 22, ಶ್ರೀರಾಮನಗರ 5 ಸೇರಿ ಒಟ್ಟು 506 ಮನೆ ಹಂಚಿಕೆ ಮಾಡಲಾಗಿದೆ.ಚನ್ನಗಿರಿ ತಾಲೂಕಿನ ಗ್ರಾಪಂಗಳಾದ ಬಸವಾಪಟ್ಟಣ 34, ಬೆಳಲಗೆರೆ 18, ಚಿರಡೋಣಿ 30, ದಾಗಿನಕಟ್ಟೆ 17, ಜಿ.ಕೆ.ಹಳ್ಳಿ 8, ಕಬ್ಬಳ 5, ಕಂಸಾಗರ 14, ಕಣಿವೆಬಿಳಚಿ 2, ಕಾರಿಗನೂರು 10, ಕತ್ತಲಗೆರೆ 12, ಕೋಟೆಹಾಳ್ 11, ನಿಲೋಗಲ್ಲು 14, ತ್ಯಾವಣಿಗೆ 26, ರುದ್ರಾಪುರ 3, ನಿವಿಲೇಹಾಳು 16, ನಲ್ಕುದುರೆ 24 ಸೇರಿ ಒಟ್ಟು 244 ಮನೆ ಹಂಚಿಕೆ ಮಾಡಲಾಗಿದೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ಮಾಹಿತಿ ನೀಡಿದ್ದಾರೆ. ಸರ್ಕಾರ ನಿರ್ಗತಿಕರಿಗೆ, ಬಡವರಿಗೆ ಮನೆ ನೀಡಿದೆ. ಆದರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು, ಸದಸ್ಯರು ಯಾವುದೇ ಕಾರಣಕ್ಕೂ ಫಲಾನುಭವಿಗಳ ಬಳಿ ಮನೆ ನೀಡುವುದಕ್ಕೆ ಹಣ ವಸೂಲಿ ಮಾಡಬಾರದು. ಒಂದು ವೇಳೆ ಹಣ ವಸೂಲಿ ಮಾಡಿದರೆ ಫಲಾನುಭವಿಗಳು ನೇರವಾಗಿ ಶಾಸಕರನ್ನು ಸಂಪರ್ಕಿಸಬೇಕೆಂದು ಮನವಿ ಮಾಡಿದ್ದಾರೆ.

## ನೇಮಕಾತಿಗಾಗಿ ಅರ್ಜಿ ಆಹ್ವಾನ

» **ಚಿಕ್ಕಮಗಳೂರು**

ಕೃಷಿ ಇಲಾಖೆಯ ಆತ್ಮ ಯೋಜನೆಯಡಿ ಶೃಂಗೇರಿ ತಾಲ್ಲೂಕಿನಲ್ಲಿ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ತಾತ್ಕಾಲಿಕ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಫೆಬ್ರವರಿ 10 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಛೇರಿಯ ಆತ್ಮ ಡಿ.ಪಿ.ಡಿ ಪ್ರಿಯಾಂಕ ಜಿ.ಪಿ (ದೂ.ಸಂ. 88147899207) ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ನಿರ್ದೇಶಕರು ಹಾಗೂ ಯೋಜನಾ ನಿರ್ದೇಶಕರು (ಆತ್ಮ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T